# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 48 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 03–09–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 48 | Title- Code: KARKAN 28269 | Chitradurga | Date: 03-09-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಭಾರತ ದಾರ್ಶನಿಕರ, ಸಂತರ, ಶರಣರ ನಾಡು: ಸ್ವಾಮೀಜಿ 2

ವಯೋ ಸಹಜ ಕಾಯಿಲೆಗಳಿಗೆ ಆಯುರ್ವೇದ ಚಿಕಿತ್ಸೆ ಪರಿಣಾಮಕಾರಿ 3

ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಲಿಂಕ್ ವಿರೋಧಿಸಿ ಸೆ.6ರಂದು ಪ್ರತಿಭಟನೆ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಬಸವೇಶ್ವರ ಸ್ವಾಮಿಗೆ ವಿಶೇಷ ಪೂಜೆ



» ಚಿತ್ರದುರ್ಗ

ನಗರದ ದೊಡ್ಡಪೇಟೆಯ ರಂಗಯ್ಯನ ಬಾಗಿಲ ಬಳಿಯಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಸಮಿತಿಯವತಿಯಿಂದ ಸೋಮವಾರ ಶ್ರಾವಣ ಮಾಸದ ಕೊನೆಯ ದಿನವಾದ ಅಮವ್ಯಾಸೆಯ ಅಂಗವಾಗಿ ಶ್ರೀ ಬಸವೇಶ್ವರ ಸ್ವಾಮಿಗೆ ವಿಶೇಷ ಪೂಜೆಯನ್ನು ನಡೆಸಲಾಯಿತು. ಇಂದು ಮುಂಜಾನೆಯೇ ದೇವಾಲಯ ಸುತ್ತಾ–ಮುತ್ತಲ್ಲಿನ ಭಕ್ತಾಧಿಗಳು ಹಾಗೂ ಸಮಿತಿಯ ಪದಾಧಿಕಾರಿಗಳು ಗಂಗಾಪೂಜೆಯನ್ನು ನೇರವೇರಿಸಿದ ನಂತರ ಸ್ವಾಮಿಗೆ ಪಂಚಾಮೃತ ಅಭೀಷೇಕ, ಮಹಾ ರುದ್ರಾಭೀಷೇಕ ಮಹಾ ಮಂಗಳಾರತಿಯನ್ನು ನಡೆಸಲಾಯಿತು. ತದ ನಂತರ ಸ್ವಾಮಿಯನ್ನು ವಿವಿಧ ರೀತಿಯ ಹೂಗಳಿಂದ ಅಲಂಕಾರವನ್ನು ಮಾಡಲಾಗಿತ್ತು. ಭಕ್ತಾಧಿಗಳು ದೇವಾಲಯಕ್ಕೆ ಆಗಮಿಸಿ ಸ್ವಾಮಿಗೆ ಪೂಜೆಯನ್ನು ನೇರವೇರಿಸಿ ಪ್ರಸಾದವನ್ನು ಸ್ವೀಕಾರ ಮಾಡಿದರು.

### ಜಾನಪದ ಪರಿಷತ್‌ಗೆ ಅಧ್ಯಕ್ಷರಾಗಿ ಪರಶುರಾಮಪ್ಪ ನೇಮಕ

» ಹೊಸದುರ್ಗ



ಕನ್ನಡ ಜಾನಪದ ಪರಿಷತ್ ಗೆ ತಾಲ್ಲೂಕು ಘಟಕದ ಅಧ್ಯಕ್ಷರನ್ನಾಗಿ ನಾಗೇನಹಳ್ಳಿ ಮೋರಾಜಿ9 ವಸತಿ ಶಾಲೆಯ ಪ್ರಾಂಶುಪಾಲರಾದ ಶ್ರೀ ಪರಶುರಾಮಪ್ಪ ಇವರನ್ನು ರಾಜ್ಯಾಧ್ಯಕ್ಷ ಜಿ.ಬಾಲಾಜಿ ಆದೇಶದಂತೆ ಜಿಲ್ಲಾಧ್ಯಕ್ಷರಾದ ಬಿ.ಮೈಲಾರಪ್ಪ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ನಮ್ಮ ಗ್ರಾಮೀಣ ಪ್ರದೇಶಗಳಲ್ಲಿ ಅಳಿದು ಹೋಗುತ್ತಿರುವ ಜಾನಪದ ಕಲೆಗಳು ಮತ್ತು ಕಲಾವಿದರನ್ನು ಉಳಿಸಿ ಬೆಳೆಸಬೇಕು. ಆ ಮೂಲಕ ನಾಡಿನ ಸಾಂಸ್ಕೃತಿಕ ಸಂಪತ್ತು ಹೆಚ್ಚಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೆ.18 ರಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಸಭೆ

» ಚಿತ್ರದುರ್ಗ

ಸೆಪ್ಟಂಬರ್ 18 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಪ್ರಾದೇಶಿಕ ಸಾರಿಗೆ ಕಚೇರಿ ಸಭಾಂಗಣದಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯನ್ನು ಆಯೋಜಿಸಲಾಗಿದೆ. ಕರ್ನಾಟಕ ಉಚ್ಚನ್ಯಾಯಾಲಯ ಹಾಗೂ ಕೆಎಸ್‌ಟಿಎಟಿ ಮರುಪರಿಗಣನೆಗೆ ಸ್ವೀಕೃತವಾದ ವಿಷಯಗಳು ಹಾಗೂ ಖಾಸಗಿ ಕಾರ್ಯಕರ್ತರು ಸಲ್ಲಿಸಿರುವ ರಹದಾರಿ ವರ್ಗಾವಣೆ, ವ್ಯತ್ಯಯ ಹಾಗೂ ಇನ್ನಿತರ ವಿಷಯಗಳನ್ನು ಇತ್ಯರ್ಥಪಡಿಸುವ ಸಲುವಾಗಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಸಭೆ ಆಯೋಜಿಸಲಾಗಿದ್ದು, ಸಭೆಗೆ ಸಂಬಂಧಪಟ್ಟ ಅರ್ಜಿದಾರರಾಗಲಿ ಅಥವಾ ಅಧಿಕೃತ ಪ್ರತಿನಿಧಿಗಳ ಹಾಜರಾಗುವಂತೆ ಪ್ರಕಟಣೆ ತಿಳಿಸಿದೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅಧಿಕಾರಿಗಳಿಗೆ ಸೂಚನೆ

# ಬಾಲ್ಯವಿವಾಹ ಪ್ರಕರಣ: ಜಿಲ್ಲೆಯಲ್ಲಿ ಹೆಚ್ಚಿನ ಜಾಗೃತಿ ಶಿಬಿರ ಆಯೋಜಿಸಿ

» ಚಿತ್ರದುರ್ಗ

ಬಾಲ್ಯವಿವಾಹ ಪಿಡುಗು ಬಹಳ ಗಂಭೀರವಾದ ವಿಷಯವಾಗಿದ್ದು, ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿಯೇ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಿದ್ದು, ನಂ.1 ಸ್ಥಾನ ಪಡೆದಿದೆ. ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬಾಲ್ಯವಿವಾಹ ಜಾಗೃತಿ ಶಿಬಿರಗಳನ್ನು ಹೆಚ್ಚಾಗಿ ಆಯೋಜಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಖಾತೆ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯ ವಿವಾಹ ಪ್ರಕರಣಗಳು ಜಿಲ್ಲೆಯಲ್ಲಿ ಹೆಚ್ಚಾದ ಹಿನ್ನಲೆಯಲ್ಲಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಲು ಜಿಲ್ಲೆಗೆ ಆಗಮಿಸಿದ್ದೇನೆ. ಜಿಲ್ಲೆಯಲ್ಲಿ ಹೆಚ್ಚಿದ ಬಾಲ್ಯ ವಿವಾಹ ತಡೆಗೆ ಕೈಗೊಂಡ ಕ್ರಮಗಳೇನು? ಯಾವ ಕ್ರಮಗಳು ಕೈಗೊಂಡರೆ ಬಾಲ್ಯವಿವಾಹ ತಡೆಯಲು ಸಾಧ್ಯವಿದೆ? ಅಧಿಕಾರಿಗಳ ಕಾರ್ಯವೈಖರಿ ಏನು? ತಪ್ಪಿತಸ್ಥ ಎಷ್ಟು ಜನರಿಗೆ ಶಿಕ್ಷೆಯಾಗಿದೆ ಎಂದು ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅಧಿಕಾರಿಗಳನ್ನು ಪ್ರಶ್ನಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ಈಗಾಗಲೇ ಶಾಲಾ–ಕಾಲೇಜು,ವಿದ್ಯಾರ್ಥಿನಿಲಯಗಳಲ್ಲಿ ಬಾಲ್ಯ ವಿವಾಹ ನಿಷೇಧ ಕುರಿತು ಜಾಗೃತಿ ಶಿಬಿರ ನಡೆಸಿ ಅರಿವು ಮೂಡಿಸಲಾಗುತ್ತಿದೆ. ಬಾಲ್ಯವಿವಾಹ ನಿಷೇಧ ಅಧಿಕಾರಿಗಳಿಗೂ ಈ ಕುರಿತು ತರಬೇತಿ ನೀಡಲಾಗಿದೆ ಎಂದು ಹೇಳಿದರು.

ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ 87 ದೂರುಗಳು ಬಂದಿದ್ದು, 42 ಪ್ರಕರಣಗಳನ್ನು ತಡೆಯಲಾಗಿದ್ದು, 41 ಬಾಲ್ಯ ವಿವಾಹ ಪ್ರಕರಣಗಳು ನಡೆದಿವೆ, ಈ ಪ್ರಕರಣಗಳಿಗೆ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ತಾಯಂದಿರ ಮರಣ ಪ್ರಮಾಣ ಒಂದು ಲಕ್ಷ ಜೀವಂತ ಜನನಕ್ಕೆ 83.29 ಇರುವುದು ಕಳವಳಕಾರಿಯಾಗಿದೆ. ತಾಯಂದಿರ ಮರಣ ರಾಜ್ಯ ಪ್ರಮಾಣ ಸರಾಸರಿ 69 ರಷ್ಟಿದೆ. ಸಾಂಸ್ಥಿಕ ಹೆರಿಗೆಯ ನಂತರೂ ಬಾಣಂತಿಯರು ಸಾವನ್ನಪ್ಪುತ್ತಿರುವುದು ಏಕೆ? ಆರೋಗ್ಯ ಇಲಾಖೆ, ಆಶಾ ಕಾರ್ಯಕರ್ತೆಯರು ಹೆರಿಗೆ ನಂತರ ಬಾಣಂತಿಯರ ಆರೋಗ್ಯದ ಬಗ್ಗೆ ಕಾಳಜಿ ವಹಿಸುತ್ತಿಲ್ಲವೇ? ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್ ಅವರನ್ನು ಪ್ರಶ್ನಿಸಿದರು.

ಜಿಲ್ಲೆಯಲ್ಲಿಜುಲೈವರೆಗೆ5ಬಾಣಂತಿಯರು ಸಾವನ್ನಪ್ಪಿದ್ದಾರೆ. ಇವರೆಲ್ಲರೂ 21 ರಿಂದ 24 ವಯೋಮಾನದವರಾಗಿದ್ದು, ಆಸ್ಪತ್ರೆಯಲ್ಲಿ ಹೆರಿಗೆ ಆದ ಮೇಲೆ ಮನೆಗೆ ತೆರಳಿದ ನಂತರ ಸಾವನ್ನಪ್ಪಿದ್ದಾರೆ ಎಂದು ಡಾ.ಅಭಿನವ್ ತಿಳಿಸಿದರು.

ಜಿಲ್ಲೆಯಲ್ಲಿ ಶಿಶು ಮರಣ ಪ್ರಮಾಣ ಒಂದು ಸಾವಿರ ಜೀವಂತ ಜನನಕ್ಕೆ 13 ಇದೆ. ರಾಜ್ಯದ ಶಿಶು ಪ್ರಮಾಣ ಸರಾಸರಿ 19 ರಷ್ಟಿದ್ದು, ಕಳೆದ ವರ್ಷಕ್ಕೆ ಹೋಲಿಸಿದರೆ ಜಿಲ್ಲೆಯ ಶಿಶು ಪ್ರಮಾಣ ಕಡಿಮೆಯಾಗಿದೆ ಎಂದು ಜಿಲ್ಲಾಧಿಕಾರಿ.ಟಿ.ವೆಂಕಟೇಶ್ ಸಚಿವರ ಗಮನಕ್ಕೆ ತಂದರು.

**ಜಿಲ್ಲೆಯ ಶೈಕ್ಷಣಿಕ ಸಾಧನೆಗೆ ಅಸಮಾಧಾನ:** ಜಿಲ್ಲೆಯ ಮಹಿಳಾ ಸಾಕ್ಷರತಾ ಪ್ರಮಾಣ ಶೇ.65 ರಷ್ಟಿದೆ. ಕಳೆದ ವರ್ಷ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನದಲ್ಲಿದ್ದ ಜಿಲ್ಲೆ ಈ ಬಾರಿ 21ನೇ ಸ್ಥಾನಕ್ಕೆ ಕುಸಿದಿದೆ ಎಂದು ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ಅಸಮಾಧಾನ ವ್ಯಕ್ತಪಡಿಸಿದರು.ನನ್ನ ಉಸ್ತುವಾರಿ ಉಡುಪಿ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಕ್ರಮ ಕೈಗೊಳ್ಳಲಾಗಿದೆ. ಇದರ ಪರಿಣಾಮ ಕಳೆದ ಬಾರಿ 19ನೇ ಸ್ಥಾನದಲ್ಲಿದ್ದ ಉಡುಪಿ ಜಿಲ್ಲೆ ಮೊದಲನೆ ಸ್ಥಾನಕ್ಕೇರಿಕೆಯಾಗಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿ ಒಟ್ಟಾಗಿ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಪ್ರಯತ್ನಿಸಬೇಕು ಎಂದು ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಸೂಚನೆ ನೀಡಿದರು.ಕಳೆದ ಕೆಡಿಪಿ ಸಭೆಯಲ್ಲಿಯೇ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಕ್ರಮ ಕೈಗೊಳ್ಳುವ ಕಠಿಣ ನಿರ್ದೇಶನ ನೀಡಿದ್ದೇನೆ. ಫಲಿತಾಂಶ ಇಳಿಕೆಗೆ ಸಂಬಂಧಪಟ್ಟ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಹೊಣೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಅಂಗನವಾಡಿ ಕಟ್ಟಡಕ್ಕೆ ಸಿಎ ನಿವೇಶನ ಹಂಚಿಕೆ:ಅಂಗನವಾಡಿಕಟ್ಟಡಕ್ಕೆಉಚಿತವಾಗಿ ಸಿಎ ನಿವೇಶನ ಹಂಚಿಕೆ ಮಾಡಲು ಸರ್ಕಾರದಿಂದ ತೀರ್ಮಾನಿಸಲಾಗಿದೆ. ಈ ಬಗ್ಗೆ ಶೀಘ್ರ ಆದೇಶ ಹೊರಡಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಹೇಳಿದರು.

ಜಿಲ್ಲೆಯ ಗಣಿಬಾಧಿತ ತಾಲ್ಲೂಕುಗಳಲ್ಲಿ ಕೆ.ಎಂ.ಇ.ಆರ್.ಸಿ ಹಾಗೂ ಡಿ.ಎಂ.ಎಫ್ ಅನುದಾನದಡಿ ಅಂಗನವಾಡಿಗಳ ನಿರ್ಮಾಣ ಕಾರ್ಯಕ್ಕೆ ಚಾಲನೆ ನೀಡಿ. ಉಳಿದ ತಾಲ್ಲೂಕುಗಳಿಗೆ ಇಲಾಖೆಯಿಂದ ಅನುದಾನ ಬಿಡುಗಡೆ ಮಾಡುವ ಭರವಸೆಯನ್ನು ಸಚಿವರು ನೀಡಿದರು.

ಜಿಲ್ಲೆಯಲ್ಲಿ 2428 ಅಂಗನವಾಡಿ ಕೇಂದ್ರಗಳು ಇವೆ. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ 1798 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಗ್ರಾಮೀಣ ಪ್ರದೇಶದಲ್ಲಿ 112 ಸ್ಥಳಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ನಿವೇಶನ ಲಭ್ಯವಿದೆ. 43 ಸ್ಥಳಗಳಲ್ಲಿ ನಿವೇಶನ ಲಭ್ಯವಿಲ್ಲ. ನಗರ ಪ್ರದೇಶದಲ್ಲಿ 22 ಕಡೆ ನಿವೇಶನ ಲಭ್ಯವಿದ್ದು, 107 ಕಡೆ ನಿವೇಶನ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಮಾಹಿತಿ ನೀಡಿದರು.

ಅಧಿಕಾರಿಗಳ ಗೈರಿಗೆ ಆಕ್ರೋಶ: ಅಂಗನವಾಡಿ ಕಟ್ಟಡಗಳ ನಿರ್ಮಾಣ ಪ್ರಗತಿ ಪರಿಶೀಲನೆ ವೇಳೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಸಭೆಗೆ ಗೈರಾಗಿ, ಅವರ ಬದಲು ಸಹಾಯಕ ಇಂಜಿನಿಯರ್ ಸಭೆಗೆ ಆಗಮಿಸಿದ್ದನ್ನು ಗಮನಿಸಿದ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ತೀವ್ರ ಅಸಮಾಧಾನ ಹೊಂದಿ ಸಿಟ್ಟಾದ ಪ್ರಸಂಗ ಸಭೆಯಲ್ಲಿ ನಡೆಯಿತು. ಅಂಗನವಾಡಿಗಳಿಗೆ ಬಡವರ ಮಕ್ಕಳು ಬರುತ್ತಾರೆ. ಇಲಾಖೆಯ ಅಂಗನವಾಡಿ ಕಟ್ಟಡ ನಿರ್ಮಾಣದ ಪ್ರಮುಖ ಹೊಣೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ್ದಾಗಿದೆ. ಇದುವರೆಗೂ ಜಿ.ಪಂ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆಯೇ? ಪಿಆರ್‌ಇಡಿ, ಆರೋಗ್ಯ, ಜಿ.ಪಂ. ಸೇರಿದಂತೆ ಪ್ರಮುಖ ಅಧಿಕಾರಿಗಳು ಸಭೆಗೆ ಗೈರು ಹಾಜರಿಯಾದರೆ ಹೇಗೆ? ಎಂದು ಸಚಿವೆ ಆಕ್ರೋಶ ವ್ಯಕ್ತಪಡಿಸಿದರು.


ಪುಟ 2




### ಅಂಗನವಾಡಿಗಳಲ್ಲಿ ಮಾಂಟೆಸ್ಸರಿ ಪ್ರಾರಂಭ

ಬಡವರ ಮಕ್ಕಳಿಗೂ ಕೂಡ ಬಾಲ್ಯದಲ್ಲಿ ಉತ್ತಮ ಶಿಕ್ಷಣ ಸಿಗಬೇಕು, ಖಾಸಗಿ ನರ್ಸರಿಗಳ ಹಾವಳಿ ತಡೆಗಟ್ಟಬೇಕು ಎಂಬ ಉದ್ದೇಶದಿಂದ ಸರ್ಕಾರವೇ ರಾಜ್ಯದಲ್ಲಿ ಅಂಗನವಾಡಿಗಳಲ್ಲಿಯೇ ಎಲ್‌ಕೆಜಿ, ಯುಕೆಜಿ ಶಿಕ್ಷಣ ನೀಡಲು ಸರ್ಕಾರಿ ಮಾಂಟೆಸ್ಸರಿ ಪ್ರಾರಂಭ ಮಾಡಬೇಕು ಎಂಬ ದಿಟ್ಟ ಹೆಜ್ಜೆ ಇಟ್ಟಿದೆ. ಈ ನಿಟ್ಟಿನಲ್ಲಿ ಇದಕ್ಕೆ ನೇಮಕಗೊಳ್ಳುವವರಿಗೆ ಪಿಯುಸಿಯನ್ನು ಕನಿಷ್ಠ ವಿದ್ಯಾರ್ಹತೆ ಆಗಿ ನಿಗದಿಪಡಿಸಿದೆ. ರಾಜ್ಯದಲ್ಲಿ ಪದವಿ, ಸ್ನಾತಕೋತ್ತರ ಪದವಿಧರ ಮಹಿಳೆಯರು ಕೂಡ ಅರ್ಜಿ ಸಲ್ಲಿಸಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಚಳ್ಳಕೆರೆ ಶಾಸಕ ರಘುಮೂರ್ತಿ ಅವರು ವಿಧವೆಯರಿಗೆ ಹಾಗೂ ವಿಕಲಚೇತನ ಮಹಿಳೆಯರಿಗೆ ನೇಮಕದಲ್ಲಿ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು, ಇದಕ್ಕೆ ಸ್ಪಂದಿಸಿದ ಸಚಿವರು, ನಾನೂ ಕೂಡ ಮಹಿಳೆಯಾಗಿದ್ದು, ಅವರ ಬಗ್ಗೆ ನನಗೂ ಕಾಳಜಿ ಇದೆ. ವಿಧವೆಯರಿಗೆ ಹಾಗೂ ವಿಕಲಚೇತನ ಮಹಿಳೆಯರಿಗೆ ನೇಮಕದಲ್ಲಿ ಈಗಿರುವ ಕೃಪಾಂಕವನ್ನು ಶೇ. 5 ರಿಂದ 10 ಕ್ಕೆ ಹೆಚ್ಚಿಸಲು ಕ್ರಮಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

### ಗರ್ಭಿಣಿಯರು, ಬಾಣಂತಿಯರು, ಮಕ್ಕಳ ಆಹಾರ ಅಕ್ರಮ ಸಾಗಾಣಿಕೆಗೆ ಕಠಿಣ ಕ್ರಮ

ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳು ಆರೋಗ್ಯವಂತರಾಗಲಿ ಎಂಬ ಉದ್ದೇಶದಿಂದ ಇಲಾಖೆಯು ಅಂಗನವಾಡಿ ಕೇಂದ್ರಗಳ ಮೂಲಕ ಪೌಷ್ಠಿಕ ಆಹಾರವನ್ನು ನೇರವಾಗಿ ಅವರ ಮನೆಗೆ ತಲುಪಿಸುವ ಕಾರ್ಯ ಮಾಡುತ್ತಿದೆ. ಈ ನಡುವೆ, ರಾಜ್ಯದ ವಿವಿಧೆಡೆ ಈ ಆಹಾರ ಅಕ್ರಮವಾಗಿ ಬೇರೆಯವರ ಮನೆ ಸೇರುತ್ತಿದೆ ಎಂಬ ಸಾಕಷ್ಟು ದೂರುಗಳು ಕೇಳಿಬರುತ್ತಿವೆ. ಯಾವುದೇ ಕಾರಣಕ್ಕೂ ಇಂತಹದನ್ನು ನಾನು ಸಹಿಸುವುದಿಲ್ಲ. ಈ ರೀತಿ ಅಕ್ರಮವಾಗಿ ಆಹಾರ ಸಾಗಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ಇದಕ್ಕೆ ಆಯಾ ಅಂಗನವಾಡಿ ವ್ಯಾಪ್ತಿಯ ಮೇಲ್ವಿಚಾರಕರು ಸಂಪೂರ್ಣ ಹೊಣೆ ಹೊರಬೇಕಾಗುತ್ತದೆ ಎಂದು ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಎಚ್ಚರಿಕೆ ನೀಡಿದರು.

## ಪ್ರಮುಖ ಸುದ್ದಿ

### ಸರ್ಕಾರಿ ನೌಕರರ ಸಂಘದ ವಾರ್ಷಿಕ ಮಹಾಸಭೆಯಲ್ಲಿ ಶಾಸಕ ಬಿ.ಜಿ.ಗೋವಿಂದಪ್ಪ ಸಲಹೆ

# ಸರ್ಕಾರಿ ನೌಕರರು ಪ್ರಾಮಾಣಿಕ ಸೇವೆ ಮಾಡಿ, ಜನಮನ್ನಣೆ ಗಳಿಸಿ

» ಹೊಸದುರ್ಗ

ಪ್ರಸ್ತುತ ಗ್ರಾಮಗಳಲ್ಲಿ ಹಾಗೂ ಸಾರ್ವಜನಿಕರಲ್ಲಿ ಅಧಿಕಾರಿಗಳ ಬಗ್ಗೆ ಗೌರವ ಕಡಿಮೆಯಾಗುತ್ತಿದೆ. ಎಲ್ಲಾ ಇಲಾಖೆಗಳ ಸರ್ಕಾರಿ ನೌಕರರು ಪ್ರಾಮಾಣಿಕವಾಗಿ ಸೇವೆ ಮಾಡಿ, ಪ್ರತಿಯೊಬ್ಬರಿಗೆ ಸರ್ಕಾರದ ಯೋಜನೆಗಳು ತಲುಪುವಂತೆ ಕಾರ್ಯನಿರ್ವಹಿಸುವುದರ ಮೂಲಕ ಜನಮನ್ನಣೆ ಹಾಗೂ ಸರ್ಕಾರದ ಮನ್ನಣೆ ಗಳಿಸಬೇಕು ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಸಲಹೆ ನೀಡಿದರು.

ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಸೋಮವಾರ ಆಯೋಜಿಸಿದ್ದ 'ವಾರ್ಷಿಕ ಮಹಾಸಭೆ ಹಾಗೂ ಕಾರ್ಯಾಗಾರ' ಉದ್ಘಾಟಿಸಿ ಅವರು ಮಾತನಾಡಿದರು. ಸಂವಿಧಾನದಲ್ಲಿ ಕಾರ್ಯಾಂಗದ ಬಗ್ಗೆ ತಿಳಿಸಲಾಗಿದೆ. ಆ ಕಾರ್ಯಾಂಗದಲ್ಲಿ ಸೇವೆ ಸಲ್ಲಿಸುವವರೇ ನೌಕರರಾಗಿದ್ದಾರೆ.ಬಹಳಜವಾಬ್ದಾರಿಯುತ ಕೆಲಸದಲ್ಲಿರುವ ನೀವುಗಳು ಕಾನೂನಿನ ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು. ಇಲಾಖೆ ಮುಖ್ಯಸ್ಥರಿಗೆ, ಪ್ರತಿಯೊಬ್ಬ ಸಾರ್ವಜನಿಕ ಹಾಗೂ ನಿಮ್ಮ ಸೇವೆಗೆ ಮೊದಲ ಆದ್ಯತೆ ನೀಡಿ. ಆಗ ಎಲ್ಲಾ ಅಧಿಕಾರಿಗಳಿಗೂ ಸರ್ಕಾರದಿಂದ ಹಾಗೂ ಜನರಿಂದ ಗೌರವ ದೊರೆಯುತ್ತದೆ. ತಾಲ್ಲೂಕಿನ ಎಲ್ಲಾ ಇಲಾಖೆಗಳ ಮುಖ್ಯಸ್ಥರೊಂದಿಗೆ ಸಭೆ ಕರೆದು, ಪ್ರಗತಿಪರಿಶೀಲನೆನಡೆಸಲಾಗಿದೆ.ತಾಲ್ಲೂಕಿನ ಇಲಾಖೆಗಳು ಅಭಿವೃದ್ಧಿ ಕಾರ್ಯದಲ್ಲಿ ಹಿಂದುಳಿದಿವೆ.ನೌಕರರುಮೇಲಾಧಿಕಾರಿಗಳ ಮಾತಿಗೆ ಮನ್ನಣೆ ಕೊಟ್ಟು, ಅವರ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸಿ. ಪ್ರತಿಯೊಬ್ಬರಿಗೂ ಎಲ್ಲಾ ಸೌಲಭ್ಯಗಳು ಸಿಗುವಂತೆ ಕಾನೂನು ಚೌಕಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು. ಯಾವುದೇ ಸಭೆ ನಡೆಸಿದರೂ ಜನರು ಅರ್ಜಿಯನ್ನು ರಾಜಕಾರಣಿಗಳ ಬಳಿ ತರಬಾರದು. ಅವರ ಸಮಸ್ಯೆಗಳುಅಲ್ಲಿಯೇಇತ್ಯರ್ಥವಾಗುವಂತೆ ಮಾಡಬೇಕು. ಆಗ ಮಾತ್ರ ಸರ್ಕಾರ ನೀಡಿರುವ 7ನೇ ವೇತನ ಆಯೋಗಕ್ಕೆ ನೀವು ಪ್ರತಿಫಲ ನೀಡಿದಂತಾಗುತ್ತದೆ. ಅಲ್ಲದೇ ಸರ್ಕಾರಕ್ಕೂ ಆತ್ಮ ತೃಪ್ತಿ ಇರುತ್ತದೆ ಎಂದರು.



> ವೇದಿಕೆ ಮೇಲೆ ಮಾತನಾಡುವ ಮಾತಿಗೂ ಬೇರೆ ಕಡೆಗಳಲ್ಲಿ ಹಾಡುವ ಮಾತಿಗೂ ಬಹಳ ವ್ಯತ್ಯಾಸವಿದೆ. ಮಾತಿಗೆ ಬಹಳ ಮಹತ್ವ ಇರಬೇಕು. ಇಲ್ಲವಾದರೆ, ಮಾತುಗಳು ಶಕ್ತಿ ಕಳೆದುಕೊಳ್ಳುತ್ತವೆ. ನಾವಾಡುವ ಮಾತುಗಳು ಪರಿಣಾಮಕಾರಿಯಾಗಿರಬೇಕು. ಗಾಂಧೀಜಿಯವರ "ಮಾಡು ಇಲ್ಲವೇ ಮಾಡಿ" ಎಂಬ ಮಾತಿಗೆ ದೇಶವೇ ಬ್ರಿಟಿಷರ ವಿರುದ್ಧ ಒಂದೂಗೂಡಿತು. ಮಾತುಗಳು ಆ ಮಟ್ಟಿಗೆ ಗಟ್ಟಿಯಾಗಿರಬೇಕು. ಶಿಕ್ಷಕರಿಗೆ ಭವಿಷ್ಯವಿಲ್ಲ, ಮುಂದೆ ಆನ್ಲೈನ್ ಮೂಲಕ ಪಾಠ ಬೋಧಿಸುವ ಪದ್ಧತಿ ಬಂದರೆ, ಅಚ್ಚರಿ ಪಡಬೇಕಿಲ್ಲ. ತಂತ್ರಜ್ಞಾನ ಮನುಷ್ಯನನ್ನು ಕೈಕಟ್ಟಿ ಕುಳಿಸುತ್ತದೆ. ನಾನು ಈ ಪದ್ಧತಿಯಲ್ಲಿ ಇರಬೇಕೆಂದು ಸಾಬೀತು ಪಡಿಸದಿದ್ದರೆ, ಶಿಕ್ಷಕರು ವೃತ್ತಿಯಲ್ಲಿ ಇರುವುದೇ ಕಷ್ಟಕರವಾಗುತ್ತದೆ. ಇಲ್ಲಿ ನಾಯಕನನ್ನು ಯಾರು ಮಾಡುವುದಿಲ್ಲ, ನಮಗೆ ನಾವೇ ನಾಯಕರಾಗಿ ಬೆಳೆಯಬೇಕು. ನಾವು ಭಾಷೆಯ ವಿಷಯದಲ್ಲಿ ಬಹಳ ಬಡವಾಗುತ್ತಿದ್ದೇವೆ ಎಂಬುದೇ ಬೇಸರ.
>
> » **ಪ್ರೊ. ಕೃಷ್ಣೇಗೌಡ ವಾಗ್ಮಿಗಳು ಮತ್ತು ಚಿಂತಕರು, ಬೆಂಗಳೂರು**


ಪುಟ 2





## ಫಾಸ್ಟ್ ನ್ಯೂಸ್

### ಸರ್ಕಾರಿ ನೌಕರರು ಪ್ರಾಮಾಣಿಕ ಸೇವೆ ಮಾಡಿ, ಜನಮನ್ನಣೆ ಗಳಿಸಿ

» ಮೊದಲ ಪುಟದಿಂದ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಷಡಕ್ಷರಿ ಮಾತನಾಡಿ, ನೌಕರರ ಮೊದಲು ನಿಮ್ಮ ಆರೋಗ್ಯ ಕಾಪಾಡಿಕೊಳ್ಳಿ. ಜನಪರವಾಗಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ ಜನರ ಪ್ರೀತಿ ವಿಶ್ವಾಸ ಉಳಿಸಿಕೊಳ್ಳಿ. ಎಲ್ಲಾ ಹಂತಗಳಲ್ಲೂ ನೌಕರರು ಪ್ರಾಮಾಣಿಕವಾಗಿ ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ಕಾರ್ಯ ಮಾಡುತ್ತಿದ್ದಾರೆ. ಸರ್ಕಾರಕ್ಕೆ ಮೂರು ಅಂಗಗಳು ಕೂಡ ಬಹಳ ಮುಖ್ಯವಾಗಿವೆ.ಶಾಸಕಾಂಗಮಾಡಿದಕಾರ್ಯವನ್ನು ಜನರಿಗೆ ತಲುಪಿಸುವ ಕೆಲಸವನ್ನ ಕಾರ್ಯಾಂಗ ಮಾಡುತ್ತಿದೆ. ನೌಕರರನ್ನು ಸಂಘಟಿಸುವ ಕಾರ್ಯವನ್ನು ರಾಜ್ಯ ಸರ್ಕಾರಿ ನೌಕರರ ಸಂಘ ಮಾಡುತ್ತಿದೆ. ರಾಜ್ಯದಲ್ಲಿ ಮೂರುವರೆ ಲಕ್ಷ ಮಹಿಳಾ ನೌಕರರಿದ್ದು, ಅವರಿಗೆ ಹೆರಿಗೆ ಭತ್ಯೆ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಸರ್ಕಾರದ ಮೇಲೆ ಒತ್ತಡ ಹಾಕಿ, ಜಾರಿಗೆ ತರುವಂತಹ ಕೆಲಸವನ್ನು ನಮ್ಮ ಸಂಘ ಮಾಡುತ್ತಿದೆ ಎಂದರು. ಸಂಘಕ್ಕೆ ಒಳ್ಳೆಯಾದಾಗುವುದಾದರೆ, ನಾನು ಯಾವುದೇ ತೀರ್ಮಾನಕ್ಕೂ ಬದ್ಧ. ನಾನು ಸಂಘಕ್ಕೆ ಅಧ್ಯಕ್ಷನಾದ ಮೇಲೆ 26 ಆದೇಶಗಳನ್ನು ಮಾಡಿಸಿದ ತೃಪ್ತಿಯಿದೆ. 7ನೇ ವೇತನ ಆಯೋಗದ ಯಶಸ್ಸು ಎಲ್ಲರಿಗೂ ಸಲ್ಲುತ್ತದೆ. ಸಂಘದ ಸಂಘಟನೆ ಕಾರ್ಯಕ್ಕೆ ಎಲ್ಲರೂ ಕೈ ಜೋಡಿಸಿ. ಎನ್.ಪಿ.ಎಸ್ ಒ.ಪಿ.ಎಸ್ ಆಗುವ ಕೆಲಸವನ್ನ ನೂರಕ್ಕೆ ನೂರರಷ್ಟು ಮಾಡಿಸುತ್ತೇನೆ. ನೌಕರರ ಕುಟುಂಬಕ್ಕೆ ಉಚಿತ ಚಿಕಿತ್ಸೆ ನೀಡಬೇಕು. ಮುಂದಿನ ದಿನಗಳಲ್ಲಿ ಕೇಂದ್ರ ಮಾದರಿಯ ವೇತನ ಆಯೋಗ ಪಡೆಯಲು ಕಟಿಬದ್ಧರಾಗೋಣ. ಎಲ್ಲಾ ನೌಕರರಿಗೂ ಸಿಗುವಂತಹ ಗೌರವ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಸಿಗಬೇಕೆಂದು ಹೇಳಿದರು.ಈ ವೇಳೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಗಂಗಾಧರಪ್ಪ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಎಚ್.ಎಸ್.ನವೀನ್ ಕುಮಾರ್, ಡಾ.ರಾಘವೇಂದ್ರ ಪ್ರಸಾದ್, ತಹಶೀಲ್ದಾರ್ ತಿರುಪತಿ ಪಾಟೀಲ್, ಕಾರ್ಯಾಪಾಲಕ ಅಭಿಯಂತರ ಪ್ರಕಾಶ್. ಎಂ, ಸಹಾಯಕ ಕಾರ್ಯಪಾಲಕ ಸುರೇಶ್, ಸಹಾಯಕ ಪ್ರಕಾಶ್, ಮಂಜುನಾಥ್ ಬಿ.ಆರ್. ಸಹಾಯಕ ನಿರ್ದೇಶಕರು ಭೂಮಾಪನ ಇಲಾಖೆ ವಿನಾಯಕ, ಪ್ರಕಾಶ್ ಸಹ ಶಿಕ್ಷಕರ ಸಂಘದ ಅಧ್ಯಕ್ಷ, ಮಹಾಂತೇಶ್ ಕ್ರೀಡಾಧಿಕಾರಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ್ ಕೆ.ಆರ್. ಕಾರ್ಯದರ್ಶಿ ಮಲ್ಲಿಕಾರ್ಜುನ್, ಪಶು ಸಂಗೋಪನಾ ಇಲಾಖೆ ಕಿರಣ್, ಅಜ್ಜಂಪುರ ಅಧ್ಯಕ್ಷ ಈಶ್ವರಪ್ಪ, ನಿವೃತ್ತ ಬಡ್ತಿ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಆಂಜಿನಪ್ಪ, ಸಹಾಯಕ ಕಾರ್ಯಪಾಲಕ ಅಭಿಯಂತರರು ಸುನೀಲ್ ಕುಮಾರ್, ಶಾಂತಪ್ಪ, ಉಪಾಧ್ಯಕ್ಷ ಮೋಹನ್ ಕುಮಾರ್, ಪ್ರಧಾನ ಕಾರ್ಯದರ್ಶಿ ಶಶಿಧರ್, ಕಾರ್ಯದರ್ಶಿ ಕೃಷ್ಣಮೂರ್ತಿ ಮತ್ತು ಮಾಜಿ ಅಧ್ಯಕ್ಷ ಆರ್. ಲಕ್ಷ್ಮಯ್ಯ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ನೌಕರರು ಪಾಲ್ಗೊಂಡಿದ್ದರು.

### ಸರ್ಕಾರಿ ಬಾಲಮಂದಿರಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭೇಟಿ, ಪರಿಶೀಲನೆ



» ಚಿತ್ರದುರ್ಗ

ನಗರದ ಜಿಲ್ಲಾ ಪಂಚಾಯತ್ ಹತ್ತಿರದ ಬಾಲಕರ ಮತ್ತು ಬಾಲಕಿಯರ ಸರ್ಕಾರಿ ಬಾಲಮಂದಿರಕ್ಕೆ ಸೋಮವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಖಾತೆ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮಕ್ಕಳಿಗೆ ಪೌಷ್ಠಿಕ ಹಾಗೂ ಗುಣಮಟ್ಟದ ಆಹಾರ ನೀಡಬೇಕು. ಮಕ್ಕಳ ಸುರಕ್ಷತೆ ಹೆಚ್ಚಿನ ಒತ್ತು ನೀಡಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ ತುಂಬಿ ಉತ್ತಮ ಶೈಕ್ಷಣಿಕ ಪ್ರಗತಿ ಸಾಧಿಸಲು ನಿಲಯ ಪಾಲಕರು ಪ್ರೋತ್ಸಾಹ ನೀಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಇಲಾಖೆ ನಿರ್ದೇಶಕ ಸಿದ್ದೇಶ್ವರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಜಿಲ್ಲಾ ಕಲ್ಯಾಣ ಸಮಿತಿ ಅಧ್ಯಕ್ಷ ಪ್ರಭಾಕರ್, ತಹಶೀಲ್ದಾರ್ ನಾಗವೇಣಿ ಸೇರಿದಂತೆ ಮತ್ತಿತರರು ಇದ್ದರು.

### ದೀಕ್ಷಾ ಭೂಮಿಗೆ ಯಾತ್ರೆ, ಅರ್ಜಿ ಅವಧಿ ವಿಸ್ತರಣೆ

» ದಾವಣಗೆರೆ

ಮಹಾರಾಷ್ಟದ ನಾಗಪುರ ದೀಕ್ಷಾ ಭೂಮಿಯಲ್ಲಿ ಅಕ್ಟೋಬರ್ 12 ರಂದು ನಡೆಯಲಿರುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ಯಾತ್ರೆ ಕೈಗೊಳ್ಳಬಯಸುವ ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳಿಂದ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಸೆಪ್ಟೆಂಬರ್ ರವರೆಗೆ ವಿಸ್ತರಿಸಲಾಗಿದೆ .

## ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಿಂದ ಪರಿಶೀಲನೆ

# ಏಪ್ರಿಲ್‌ನಿಂದ ಆಗಸ್ಟ್‌ವರೆಗೆ 35 ಬಾಲ್ಯ ವಿವಾಹ

### ಶಾಲೆ ಬಿಟ್ಟ ಮಕ್ಕಳ ಗುರುತಿಸಲು ಸಮನ್ವಯತೆ ಸಾಧಿಸದ ಇಲಾಖೆಗಳು, ಹಾಸ್ಟೆಲ್, ಅಂಗನವಾಡಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಸೂಚನೆ

» ದಾವಣಗೆರೆ

ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವುದು ಎಲ್ಲರ ಜವಾಬ್ದಾರಿಯಾಗಿದ್ದು ಏಪ್ರಿಲ್ ನಿಂದ ಆಗಸ್ಟ್‌ವರೆಗೆ ಜಿಲ್ಲೆಯಲ್ಲಿ 35 ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗಿವೆ. ಶಾಲೆ ಬಿಟ್ಟ ಮಕ್ಕಳ ವಿವರ ಸಂಗ್ರಹಿಸಿ, ಇಂತಹ ಪ್ರಕರಣಗಳಿಗೆ ಕಡಿವಾಣ ಹಾಕಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಿದಾಗ ಮಾತ್ರ ನಿಯಂತ್ರಣ ಸಾಧ್ಯವಾಗಲಿದೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಅಪರ್ಣಾ ಎಂ.ಕೊಳ್ಳಾ ತಿಳಿಸಿದರು.

ಅವರು ಶನಿವಾರ ವಿವಿಧ ಅಂಗನವಾಡಿ ಕೇಂದ್ರಗಳು, ಹಾಸ್ಟೆಲ್‌ಗಳಿಗೆ ಭೇಟಿ ನೀಡಿ ನಂತರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಈ ಅವಧಿಯಲ್ಲಿ 35 ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗಿದ್ದು ಇದರಲ್ಲಿ ಮಕ್ಕಳ ರಕ್ಷಣಾ ಘಟಕದಿಂದ 32 ವಿವಾಹಗಳನ್ನು ತಡೆಗಟ್ಟಲಾಗಿದೆ. ಇದರಲ್ಲಿ 2 ಕ್ಕೆ ತಡೆ ತರಲಾಗಿದ್ದು 3 ಬಾಲ್ಯ ವಿವಾಹಗಳು ನಡೆದಿದ್ದು ಅವರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳು ಮಾಹಿತಿ ನೀಡಿದರು. ಈ ವೇಳೆ ಸದಸ್ಯರು ಮಾತನಾಡಿ ಬಾಲ್ಯ ವಿವಾಹಗಳು ನಡೆಯದಂತೆ ನೋಡಿಕೊಳ್ಳಬೇಕು, ಶಾಲೆ ಬಿಟ್ಟ ಮಕ್ಕಳ ಬಗ್ಗೆ ನಿಖರವಾದ ಅಂಕಿ ಅಂಶಗಳಿದ್ದಲ್ಲಿ ಇವೆಲ್ಲವನ್ನು ತಡೆಗಟ್ಟಬಹುದಾಗಿದ್ದು ಶಿಕ್ಷಣ ಇಲಾಖೆಯಲ್ಲಿ ನಿಖರವಾದ ಮಾಹಿತಿ ಲಭ್ಯವಾಗಬೇಕು. ಶಾಲೆ ಬಿಟ್ಟ ಮಕ್ಕಳ ವಿವರವನ್ನು ವರದಿ ಮಾಡದ ಅಂತಹ ಶಾಲಾ ಮುಖ್ಯಸ್ಥರ ಮೇಲೆ ಪ್ರಕರಣ ದಾಖಲು ಮಾಡುವ ಎಚ್ಚರಿಕೆಯನ್ನು ನೀಡಲು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ



ಇಲಾಖೆ ಉಪನಿರ್ದೇಶಕರಿಗೆ ತಿಳಿಸಿದರು.

ಬಾಲ್ಯ ವಿವಾಹ ತಡೆಗಟ್ಟಲು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಜೊತೆಗೆ ಇತರೆ 10 ಇಲಾಖೆಗಳ ಪಾತ್ರ ಇದ್ದು ಎಲ್ಲಾ ಇಲಾಖೆಗಳ ಜವಾಬ್ದಾರಿಯಾಗಿದೆ. ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕಾಗುತ್ತದೆ. ಮಕ್ಕಳಿಗೆ ಕಡ್ಡಾಯ ಶಿಕ್ಷಣ ಸಿಗಬೇಕು, ಬಾಲ ಕಾರ್ಮಿಕ ಪದ್ದತಿ ನಿಷೇಧ, ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಬೇಕಾಗಿದೆ. ಇದರಿಂದ ಮಕ್ಕಳ ಭವಿಷ್ಯ ಉತ್ತಮವಾಗಲಿದೆ ಎಂದರು.

ಆರ್.ಸಿ.ಹೆಚ್.ಪೋರ್ಟಲ್ ಅನ್ವಯ ಹದಿಹರೆಯದ ಗರ್ಭಿಣಿಯರ ವಿವರದನ್ವಯ ಜಿಲ್ಲೆಯಲ್ಲಿ 254 ಪ್ರಕರಣಗಳು ವರದಿಯಾಗಿವೆ. ಈ ಬಗ್ಗೆ ಮನೆ ಸಮೀಕ್ಷೆಯ ನಂತರ ಸಂಖ್ಯೆ 231 ಕ್ಕೆ ಇಳಿಕೆಯಾಗಿದ್ದು ಇದರಲ್ಲಿ 23 ತಾಯಂದಿರು 18 ವರ್ಷ ದಾಟಿದ್ದಾರೆ ಎಂದಾಗ ವಯಸ್ಸನ್ನು ತಿಳಿಯಲು ಆಧಾರ್ ಪರಿಗಣಿಸದೇ ಅವರ ಜನನ ಪ್ರಮಾಣ ಪತ್ರ ಪರಿಶೀಲನೆ ಮತ್ತು ಅಗತ್ಯವಿದ್ದಲ್ಲಿ ವೈದ್ಯಕೀಯ ತಪಾಸಣೆ ಮಾಡಲು ತಿಳಿಸಿ ಇಲ್ಲಿ ಪೋಷಕರೇ ಹೇಳಿದರೂ ಸಹ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಹದಿಹರೆಯದವರು ಗರ್ಭಿಣಿಯಾಗದಂತೆ ತಡೆಗಟ್ಟಬೇಕಾಗಿದ್ದು ಇದಕ್ಕೆ ಬೇಕಾದ ಎಲ್ಲಾ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದರು.

ಇಲಾಖೆಯಿಂದ ಮತ್ತು ಆಯೋಗದಿಂದ ಮಕ್ಕಳ ಬಾಲ್ಯ ವಿವಾಹ ತಡೆ, ಪೋಕ್ಸೋ ಕಾಯಿದೆ, ಬಾಲ ಕಾರ್ಮಿಕ ಪದ್ಧತಿ ನಿಷೇಧದ ಬಗ್ಗೆ ಸಾಕಷ್ಟು ಜಾಗೃತಿ ಮೂಡಿಸಲುತರಬೇತಿಕಾರ್ಯಗಾರಗಳನ್ನು ಆಯೋಜಿಸಲಾಗಿದೆ. ಮುಂದಿನ ದಿನಗಳಲ್ಲಿ ಬೇಕಾಗಿರುವುದು ಉಲ್ಲಂಘನೆ ಮಾಡುವವರ ಮೇಲೆ ಕಠಿಣ ಕ್ರಮಗಳ ಮೂಲಕ ಅನುಷ್ಠಾನವಾಗಬೇಕಾಗಿದೆ. ಕೆಲವು ಕೋಚಿಂಗ್ ಸೆಂಟರ್ ಮತ್ತು ಹಾಸ್ಟೆಲ್‌ಗಳು, ಮಕ್ಕಳ ಪಾಲನೆ ಬಗ್ಗೆ ಅನುಮತಿ ಪಡೆಯದೇ ಅನಧಿಕೃವಾಗಿ ನಡೆಯುತ್ತಿರುವ ಸಂಸ್ಥೆಗಳ ಬಗ್ಗೆ ನಿಗಾವಹಿಸಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಪೋಕ್ಸೋ ಕಾಯ್ದೆಯಡಿ 2013 ರಿಂದ 2024 ರವರೆಗೆ 731 ಪ್ರಕರಣಗಳು ದಾಖಲಾಗಿದ್ದು ಇದರಲ್ಲಿ 86 ರಲ್ಲಿ ಶಿಕ್ಷೆಯಾಗಿದ್ದು 368 ಖುಲಾಸೆಯಾಗಿವೆ. 14 ಪ್ರಕರಣಗಳು ವರ್ಗಾವಣೆಗೊಂಡಿದ್ದು 11 ಸುಳ್ಳು ಪ್ರಕರಣಗಳಾಗಿವೆ. 252 ಪ್ರಕರಣಗಳು ಇತ್ಯರ್ಥಕ್ಕೆ ಬಾಕಿ ಇವೆ. ಬಾಲ ನ್ಯಾಯ ಮಂಡಳಿಯಲ್ಲಿ 2024 ರ ಏಪ್ರಿಲ್ ನಿಂದ ಜುಲೈವರೆಗೆ 60 ಬಾಕಿ ಸೇರಿ 8 ಹೊಸದಾಗಿ ಸೇರಿದಂತೆ 68 ಪ್ರಕರಣಗಳಿವೆ. ಇದರಲ್ಲಿ 15 ಇತ್ಯರ್ಥವಾಗಿದ್ದು 1 ವರ್ಷ ಮೇಲ್ಪಟ್ಟ 7 ಗಂಭೀರ ಹಾಗೂ 9 ಘೋರ ಪ್ರಕರಣಗಳಿವೆ. ವರ್ಷದೊಳಗೆ 7 ಸಣ್ಣ ಸ್ವರೂಪ, 4 ಗಂಭೀರ, 26 ಘೋರ ಸೇರಿ ಒಟ್ಟು 53 ಪ್ರಕರಣಗಳಿವೆ. ಬಾಲ ನ್ಯಾಯ ಮಂಡಳಿಯಲ್ಲಿ ಇದೇ ಅವಧಿಯಲ್ಲಿ ಬಾಕಿ 10 ಹಾಗೂ 5 ಹೊಸ ಪ್ರಕರಣ ಸೇರಿ 15 ಇದ್ದು ಇತ್ಯರ್ಥವಾಗಬೇಕಾಗಿದೆ. ಈ ವೇಳೆ ಸದಸ್ಯರು ಮಾತನಾಡಿ ಪ್ರಕರಣಗಳಲ್ಲಿ ತಪ್ಪಿತಸ್ಥರು ಖುಲಾಸೆಯಾಗದಂತೆ ನೋಡಿಕೊಳ್ಳಲು ತಿಳಿಸಿದರು.

ಆರೋಗ್ಯ ಸೌಲಭ್ಯ ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸೂಚನೆ; ಹಾಸ್ಟೆಲ್‌ನಲ್ಲಿ ಮಕ್ಕಳಿಗೆ ಬೇಕಾದ ಸೋಪ್ ಕಿಟ್, ನ್ಯಾಪ್‌ಕಿನ್ ಸೇರಿದಂತೆ ಗುಣಮಟ್ಟದ ಆಹಾರ ಒದಗಿಸಬೇಕು ಮತ್ತು ತರಕಾರಿ, ಗುಣಮಟ್ಟದ ಬೇಳೆಕಾಳು ಒದಗಿಸಬೇಕು. ಭೇಟಿ ನೀಡಿದ ಕೆಲವು ಹಾಸ್ಟೆಲ್ ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಕೆಲವು ನ್ಯೂನ್ಯತೆಗಳು ಕಂಡು ಬಂದಿದ್ದು ಮಕ್ಕಳ ಆರೋಗ್ಯದ ಕಾರ್ಡ್ ಸರಿಯಾಗಿ ದಾಖಲು ಮಾಡಬೇಕು. ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಹಾಸ್ಟೆಲ್, ಅಂಗನವಾಡಿಯಲ್ಲಿನ ಮಕ್ಕಳ ಆರೋಗ್ಯ ತಪಾಸಣೆ ಮಾಡಿ ಎಲ್ಲಾ ವಿವರ ದಾಖಲು ಮಾಡಬೇಕು. ಹಾಸ್ಟೆಲ್, ಅಂಗನವಾಡಿಗಳಿಗೆ ವೈದ್ಯರು ಭೇಟಿ ನೀಡಿದ ಬಗ್ಗೆ ಸಹಿ ಮಾಡಲಾಗಿದೆ, ಆದರೆ ತಪಾಸಣೆ ಮಾಡಿದ ವಿವರಗಳ ದಾಖಲು ಮಾಡಿರುವುದಿಲ್ಲ. ಆರೋಗ್ಯ ಇಲಾಖೆಯಿಂದ ಎಬಿಆರ್‌ಕೆಯಡಿ 300 ಶಾಲೆಗಳ ಭೇಟಿ ಇದೆ, ಶಿಕ್ಷಣ ಇಲಾಖೆ ಅಂಕಿ ಅಂಶದಡಿ 2015 ಶಾಲೆಗಳಿದ್ದು ಒಂದೊಕ್ಕೊಂದು ತಾಳೆಯಾಗುತ್ತಿಲ್ಲ. ಇದಾಗದಂತೆ ಎಲ್ಲಾ ಶಾಲೆಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆ ಮಾಡಲು ತಿಳಿಸಿ ಹಾಸ್ಟೆಲ್‌ಗಳಲ್ಲಿನ ಮಕ್ಕಳ ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ಮಾಡಬೇಕೆಂದಿದ್ದು ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಲು ತಿಳಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರಣ್ಣವರ ಅವರು ಮಾತನಾಡಿ ಕೆಲವು ಶಾಲೆಗಳಲ್ಲಿ ಮಕ್ಕಳ ಟಿ.ಸಿ.ಕೊಡಲು ಸತಾಯಿಸುತ್ತಿದ್ದಾರೆ ಎಂಬ ದೂರುಗಳು ಪ್ರಾಧಿಕಾರಕ್ಕೆ ಬಂದಿವೆ, ಆನಗೋಡು ಸುತ್ತಮುತ್ತಲಿನ ಗ್ರಾಮಾಂತರ ಪ್ರದೇಶಕ್ಕೆ ಮಕ್ಕಳು ಶಾಲೆಗೆ ಹೋಗುವ ಹಾಗೂ ಬರುವ ಸಮಯಕ್ಕೆ ಕೆಎಸ್‌ಆರ್‌ಟಿಸಿ ಯಿಂದ ಬಸ್ ಕಲ್ಪಿಸಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಾನಾಯ್ಕ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರಸ್ತೆ ದುರಸ್ತಿಗೆ ಆಗ್ರಹಿಸಿ ರೈತ ಸಂಘದಿಂದ ಪ್ರತಿಭಟನೆ

» ಪರಶುರಾಂಪುರ

ಪರಶುರಾಂಪುರ–ಪಾವಗಡರಸ್ತೆಯಲ್ಲಿನ ಗುಂಡಿಗಳನ್ನ ದುರಸ್ತಿ ಕಾರ್ಯ ನಡೆಸುವಂತೆ ಒತ್ತಾಯಿಸಿ ಅಖಂಡಕರ್ನಾಟಕರಾಜ್ಯರೈತ ಸಂಘದ ಪದಾಧಿಕಾರಿಗಳು ಸಾರ್ವಜನಿಕರುಗುಂಡಿ ಬಿದ್ದ ಸ್ಥಳದಲ್ಲಿ ಸೋಮವಾರ ಪ್ರತಿಭಟನೆ ನಡೆಸಿದರು.

ಪಾವಗಡ ಮಾರ್ಗದಲ್ಲಿ ಬಹುತೇಕವಾಗಿರಸ್ತೆಗುಂಡಿ ಬಿದ್ದಿರುವುದು ಪೈಪ್ ಲೈನ್ ಗೆ ತೆಗೆದಿರುವಕಡೆ ಬಿಟ್ಟರೇ ನೂತನ ಹೊಸ ಸಣ್ಣ ಸೇತುವೆ ನಿರ್ಮಾಣ ಮಾಡಿದಜಾಗದಲ್ಲಿಅ ರೆಬರೆಕಾಮಗಾರಿಯಿಂದ ಗುಂಡಿಗಳ ದಬಾ9ರ್ ಹೆಚ್ಚಾಗಿದೆ.

ಮುಖ್ಯರಸ್ತೆ ನೆರೆ ಸೀಮಾಂಧ್ರ, ರಾಜಧಾನಿ ಬೆಂಗಳೂರು, ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸೇರಿದಂತೆಇನ್ನಿತರ ಮುಖ್ಯ ಪಟ್ಟಣಗಳಿಗೆ ಸಂಪರ್ಕಕಲ್ಪಿಸುವ ಮುಖ್ಯ ರಸ್ತೆಯಾಗಳಲ್ಲಿ ಸಣ್ಣ ಗುಂಡಿಗಳ ದರ್ಬಾರ್‌ಆಗಿದೆ .ಇದರಿಂದಅಪಘಾತವೂ ಹೆಚ್ಚುತ್ತಿದೆ.ರಸ್ತೆಗಳ ಬಗ್ಗೆ ಸಂಬಂಧಪಟ್ಟವರು ಗಮನ ಹರಿಸಿದೆ ಇರುವುದೇ ವಿಪರ್ಯಾಸ. ಜೀವಕ್ಕೆಅಪಾಯ ಸಂಭವಿಸುವ ಮುನ್ನರಸ್ತೆ ದುರಸ್ತಿ ಮಾಡಬೇಕು.ನಾಗರಿಕರ ಸಮಸ್ಯೆ ಪರಿಹರಿಸದಿದ್ದರೆಅನಾಹುತ ಸಂಭವಿಸಿದರೆ, ಇಲಾಖೆಗಳೇ ಹೊಣೆಗಾರರನ್ನಾಗಿ



ಮಾಡಲಾಗುವುದುಎಂದು ಪ್ರತಿಭಟನೆಕಾರರು ಎಚ್ಚರಿಸಿದರು. ಚಳ್ಳಕೆರೆಯಿಂದ ಪಾವಗಡ ಮಾರ್ಗದಲ್ಲಿ ಪರಶುರಾಂಪುರ ಹೋಬಳಿಯಗೆ ವ್ಯಾಪ್ತಿಗೆ ಮುಖ್ಯರಸ್ತೆಯಲ್ಲಿ ಪುರ್ಲಹಳ್ಳಿ,ಅಲ್ಲಾಪುರ ',ಜುಂಜರಗುಂಟೆ, ಚೌಳೂರು,ಪರಶು ರಾಂಪುರದ ಹಳೆಕೆರೆ,ಸರ್ವೋ9ದಯ ಶಾಲೆ,ಗೌರಿಪುರದಕ 'ರ್ಲಗುದ್ದು,ಕಡೇವುಡೆಗೇಟ್,ಪಿಲ್ಲಹಳ್ಳಿ,ಕ್ಯಾದಿಗುಂಟೆ ಸಮೀಪದಲ್ಲಿ ಗುಂಡಿಗಳಿಂದ ಸವಾರರು ಹೈರಾಣಾಗಿದ್ದಾರೆ.ಗುಂಡಿಗಳಿಗೆ ಮಣ್ಣು ಹಾಕಿದರೆ ಮಳೆಯಿಂದ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳನ್ನ ಮಾಡಿಕೊಂಡುಆಸ್ಪತ್ರೆಗೆ ಸೇರಿರುವ ನಿದರ್ಶನಗಳನ್ನ ಕಾಣಬಹುದಾಗಿದೆ.ಮಣ್ಣು ಬದಲು ಭದ್ರವಾಗಿಕಾಂಕ್ರೀಟ್ ಹಾಕಿ ಅದರ ಬದಲು ಹೆದ್ದಾರಿ ನೆಪ ಹೇಳದೆ ಗುಂಡಿಗಳನ್ನು ದುರಸ್ತಿಗೊಳಿಸಿ ಎಂದು ಒತ್ತಾಯಿಸಿದರು.

ಈ ಕೂಡಲೇ ಸಂಬಂಧಪಟ್ಟಇಲಾಖೆಯ ಅಧಿಕಾರಿಗಳು ರಸ್ತೆ ದುರಸ್ತಿಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ಅಹೋರಾತ್ರಿಧರಣಿ ನಡೆಸಲಾಗುವುದುಎಂದು ತಿಳಿಸಿದರು.ಈ ವೇಳೆಯಲ್ಲಿ ಅಖಂಡಕರ್ನಾಟಕರಾಜ್ಯರೈತ ಸಂಘದಉಪಾಧ್ಯಕ್ಷಜಂಪಣ್ಣ, ಪ್ರಧಾನ ಕಾರ್ಯದರ್ಶಿ ಪ್ರಕಾಶ್‌ಖಾದರ್ ಭಾಷಾ, ಹೋಬಳಿ ಘಟಕದಅಧ್ಯಕ್ಷ ನವೀನ್‌ಗೌಡ, ಉಪಾಧ್ಯಕ್ಷಕೋಡ್ಲಿ ಪರಮೇಶ್ವರಪ್ಪ, ತಿಮ್ಮಣ್ಣ,ಗೆಂಡೆತಿಮ್ಮಜ್ಜ ಸೇರಿದಂತೆಇನ್ನಿತರರುಇದ್ದರು.

## ಕಿಚ್ಚ ಸುದೀಪ್ ಜನ್ಮ ದಿನ: ಕೇಕ್ ಕತ್ತರಿಸಿ ಆಚರಣೆ



» ಚಿತ್ರದುರ್ಗ

ಕಿಚ್ಚ ಸುದೀಪ್ ರವರ 51 ನೇಹುಟ್ಟುಹಬ್ಬದ ಅಂಗವಾಗಿ ನಗರದಲ್ಲಿ ಸೋಮವಾರ ಕಿಚ್ಚ ಸುದೀಪ್ ಅಭಿಮಾನಿಗಳ ಸಂಘ ಹಾಗೂ ಮದಕರಿ ಬಳಗದವತಿಯಿಂದ ನಗರದ ಮಜೆಸ್ಟಿಕ್ ವೃತ್ತದಲ್ಲಿನ ಮದಕರಿ ನಾಯಕ ಪ್ರತಿಮೆ ಮುಂದೆ ಕೇಕ್ ಕತ್ತರಿಸುವುದರ ಮೂಲಕ ಆಚರಣೆ ಮಾಡಲಾಯಿತು.ಇದಕ್ಕೂ ಮುನ್ನಾ ನಗರದ ಗ್ರಾಮ ದೇವತೆಯಾದ ಉಚ್ಚಂಗಿ ಯಲ್ಲಮ್ಮ ದೇವಾಲಯದಲ್ಲಿ ಕಿಚ್ಚ ಸುದೀಪ್ ರವರ ಹುಟ್ಟು ಹಬ್ಬದ ಅಂಗವಾಗಿ ಅಮ್ಮನವರಿಗೆ ವಿಶೇಷ ಪೂಜೆಯನ್ನು ನಡೆಸಲಾಯಿತು. ತದ ನಂತರ ಜಿಲ್ಲಾ ಆಸ್ಪತ್ರೆಯ ಒಳ ರೋಗಿಗಳಿಗೆ ಹಣ್ಣುಗಳನ್ನು ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮದಕರಿ ಬಳಗದ ಗೋಪಾಲಸ್ವಾಮಿ ನಾಯಕ್, ಕಿಚ್ಚ ಸುದೀಪ್ ಬಳಗದ ರತ್ನಮ್ಮ, ಶಾರದಮ್ಮ, ಹೇಮಲತಾ, ಗಂಗಮ್ಮ, ಕೃಷ್ಣಮೂರ್ತಿ, ಮನೋಹರ, ಪವನ್, ಅಜೇಯ ಮದಕರಿ, ಕೌಶೀಕ್, ನಾಗು, ಅರುಣ್ ಕುಮಾರ್, ರಾಜು, ಕುಮಾರ್ ಮಂಜು, ಗಗನ್, ದುಶ್ಯಂತ್, ಮಲ್ಲಿಕಾರ್ಜುನ್, ಸಿದ್ದು, ವೀರಣ್ಣ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಬಾಲ್ಯವಿವಾಹ ಪ್ರಕರಣ: ಜಿಲ್ಲೆಯಲ್ಲಿ ಜಾಗೃತಿ ಶಿಬಿರ ಆಯೋಜಿಸಿ

» ಮೊದಲ ಪುಟದಿಂದ

ಜಿಲ್ಲೆಯ ಬಹುಪಾಲು ಜನಸಂಖ್ಯೆ ಕಲ್ಯಾಣ ಹೊಣೆ ಇಲಾಖೆ ಹೊತ್ತಿದೆ. ಖುದ್ದು ಸಚಿವೆ ಆಗಮಿಸಿ ಪರಿಶೀಲನೆ ನಡೆಸುವ ಸಭೆ ಸಂಬಂಧಪಟ್ಟ ಅಧಿಕಾರಿಗಳು ಗೈರು ಹಾಜರಾಗಿದ್ದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತರುತ್ತೇನೆ. ಜಿಲ್ಲಾಧಿಕಾರಿಗಳು ಸಹ ಅಧಿಕಾರಿಗಳಿಗೆ ನೋಟಿಸ್ ನೀಡಿ. ಇಂದಿನ ಕಾರ್ಯಕ್ರಮಗಳನ್ನು ಮುಗಿಸಿ ಚಿತ್ರದುರ್ಗ ನಗರ ತೊರೆಯುವ ಮುನ್ನವೇ ಖುದ್ದು ನನ್ನ ಬಳಿ ಆಗಮಿಸಿ ಈ ಕುರಿತು ವಿವರಣೆ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಸಚಿವರು ಸೂಚಿಸಿದರು.

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಹ ಅಧಿಕಾರಿಗಳ ಧೋರಣೆಗೆ ಅಸಮಧಾನ ವ್ಯಕ್ತಪಡಿಸಿ, ಸಚಿವರು ಬಂದರೂ ಸಂಬಂಧಪಟ್ಟ ಇಲಾಖಾ ಅಧಿಕಾರಗಳು ಇಲ್ಲ ಎಂದರೆ ಹೇಗೆ? ಯಾರಿಗೆ ತಿಳಿಸಿ ಅಧಿಕಾರಿಗಳು ಸಭೆಗೆ ಗೈರಾಗಿದ್ದಾರೆ. ಅಧಿಕಾರಿಗಳ ವಿರುದ್ದ ಕ್ರಮ ಕೈಗೊಳ್ಳುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆಯುವುದಾಗಿ ಹೇಳಿದರು.

ಪಂಚಾಯತ್ ರಾಜ್ ಇಂಜಿನಿಯರ್ ವಿಭಾಗ 192 ಅಂಗನವಾಡಿ ಕಟ್ಟಡ ಪೈಕಿ 100 ಕಟ್ಟಡ ನಿರ್ಮಾಣ ಪೂರ್ಣಗೊಳಿಸಲಾಗಿದೆ. 34 ಕಟ್ಟಡ ಪ್ರಗತಿಯಲ್ಲಿವೆ. 62 ಕಟ್ಟಡ ನಿರ್ಮಾಣ ಪ್ರಾರಂಭಿಸುವುದು ಬಾಕಿಯಿದೆ. ಕೆ.ಆರ್.ಐ.ಡಿ.ಎಲ್ ವತಿಯಿಂದ 72 ಅಂಗನಾಡಿ ಕಟ್ಟಡಗಳ ಪೈಕಿ 52 ಪೂರ್ಣಗೊಂಡಿವೆ. 1 ಕಟ್ಟಡ ಪಗ್ರತಿಯಲಿದ್ದು, 17 ಕಟ್ಟಡ ನಿರ್ಮಾಣ ಪ್ರಾರಂಭವಾಗಿಲ್ಲ. ನಿರ್ಮಿತಿ ಕೇಂದ್ರದಿಂದ 69 ಕಟ್ಟಡಗಳ ಪೈಕಿ 34 ಪೂರ್ಣಗೊಂಡಿದ್ದು 29 ಪ್ರಗತಿಯಲ್ಲಿದೆ, 6 ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಿಸಬೇಕಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಇದಕ್ಕೆ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅವರು ಅಂಗನವಾಡಿ ಕಟ್ಟಡ ನಿರ್ಮಾಣ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಸೂಚನೆ ನೀಡಿದರು.

**ಗೃಹಲಕ್ಷ್ಮೀ ಯೋಜನೆಗೆ ವರ್ಷ :** ಸಚಿವೆ ಲಕ್ಷ್ಮಿ ಹರ್ಷ: ಗೃಹಲಕ್ಷ್ಮೀ ಯೋಜನೆ ಜಾರಿಯಾಗಿ ಒಂದು ವರ್ಷ ಪೂರೈಹಿಸಿದ ಹಿನ್ನಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಖಾತೆ ಸಚಿವೆ ಲಕ್ಷ್ಮಿ ಆರ್ ಹೆಬ್ಬಾಳ್ಕರ್ ಹರ್ಷ ವ್ಯಕ್ತಪಡಿಸಿದರು.ಚುನಾವಣೆ ಪ್ರಣಾಳಿಕೆಯಲ್ಲಿ ಗೃಹಲಕ್ಷ್ಮೀ ಯೋಜನೆಗೆ ವಾಗ್ದಾನ ನೀಡಿದಾಗ ವಿರೋಧ ಪಕ್ಷಗಳು ಇದು ಕೇವಲ ಚುನಾವಣೆ ಗಿಮಿಕ್ ಎಂದಿದ್ದವು. ಆದರೆ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಯೋಜನೆ ಜಾರಿ ಮಾಡಿ ರಾಜ್ಯದ ಅರ್ಹ ಮಹಿಳೆಯರ ಖಾತೆಗೆ ಪ್ರತಿ ಮಾಹೆ ರೂ.2000 ಜಮೆ ಮಾಡಲಾಗುತ್ತಿದೆ. ಇದುವರೆಗೂ ಜೂನ್ ಮಾಹೆಯವರೆಗಿನ ಗೃಹಲಕ್ಷ್ಮೀ ಹಣವನ್ನು ಜಮೆ ಮಾಡಲಾಗಿದೆ. ಬಾಕಿ ಇರುವ ಜುಲೈ ಹಾಗೂ ಆಗಸ್ಟ್ ತಿಂಗಳ ಹಣವನ್ನು 5 ರಿಂದ 10 ದಿನದೊಳಗೆ ಜಮೆ ಮಾಡುವುದಾಗಿ ಹೇಳಿದರು.

ಗೃಹಲಕ್ಷ್ಮೀ ಯೋಜನೆಯಡಿ ಇದುವರೆಗೂ ರೂ.26,260 ಕೋಟಿ ಹಣ ಮಹಿಳೆಯರ ಖಾತೆಗೆ ಜಮೆ ಮಾಡಲಾಗಿದೆ. ಗೃಹಲಕ್ಷ್ಮೀ ಯೋಜನೆಯ ಹಣ, ದೇಶದ ಸಣ್ಣ ಪುಟ್ಟ ರಾಜ್ಯಗಳ ವಾರ್ಷಿಕ ಆಯವ್ಯಯಕ್ಕೆ ಸಮನಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು. ಯೋಜನೆ ಲಾಭ ಪಡೆದ ಮಹಿಳೆಯರು ಸಾಮಾಜಿಕ ಮಾಧ್ಯಮಗಳಲ್ಲಿ ರೀಲ್ಸ್ ಮೂಲಕ ಹಿಮ್ಮಾಯಿತಿ ನೀಡಬಹುದು. ಫೇಸ್‌ಬುಕ್, ಯುಟ್ಯೂಬ್, ಇನ್ಸ್ಟಾಗ್ರಾಂ ಮೂಲಕ ಅಭಿಪ್ರಾಯವನ್ನು ರೀಲ್ಸ್ ವಿಡಿಯೋ ಮೂಲಕ ವ್ಯಕ್ತಪಡಿಸಲು ಕೋರಿದ್ದು, ಅತ್ಯುತ್ತಮ ವಿಡಿಯೋ ರೀಲ್ಸ್‌ಗೆ ಬಹುಮಾನ ನೀಡುವುದಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಘೋಷಿಸಿದರು.

ಪಿಂಚಣಿ ಅದಾಲತ್ ನಡೆಸಿ: ಸಂಧ್ಯಾ ಸುರಕ್ಷಾ, ಮನಸ್ವಿನಿ, ಮೈತ್ರಿ, ಅಂಗವಿಕಲರ ಮಾಸಾಶನ ಸೇರಿದಂತೆ ಸಾಮಾಜಿಕ ಭದ್ರತಾ ಯೋಜನೆಗಳು ಅರ್ಹರಿಗೆ ಸಮರ್ಪಕವಾಗಿ ತಲುಪಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಪಿಂಚಣಿ ಅದಾಲತ್ ನಡೆಸಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು. ಸಾಮಾಜಿಕ ಭದ್ರತಾ ಯೋಜನೆಯ ಫಲಾನುಭವಿಗಳಿಗೆ 3–4 ತಿಂಗಳಿಂದ ಮಾಸಾಶನ ಬರುತ್ತಿಲ್ಲ ಎಂದು ದೂರುಗಳಿದ್ದು, ಈ ಹಿನ್ನಲೆಯಲ್ಲಿ ಪಿಂಚಣಿ ಹಣ ಅರ್ಹರಿಗೆ ಸಮರ್ಪಕವಾಗಿ ವಿತರಣೆಗೆ ಕ್ರಮವಹಿಸಬೇಕು. ಕಾಲಕಾಲಕ್ಕೆ ಪಿಂಚಣಿ ಅದಾಲತ್ ನಡೆಸಿ, ಅವರ ಸಮಸ್ಯೆಗಳನ್ನು ಬಗೆಹರಿಸಬೇಕು. ಅಂಗವಿಕಲರು, ವಯೋವೃದ್ಧರ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಹೇಳಿದರು.

**ವಿಕಲಚೇನರಿಗೆ ದ್ವಿಚಕ್ರ ಮೋಟಾರು ವಾಹನ ವಿತರಣೆ:** ಜಿಲ್ಲಾ ಪಂಚಾಯಿತಿ ಕಚೇರಿ ಆವರಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 33 ವಿಕಲಚೇತನ ಫಲಾನುಭವಿಗಳಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ವಿತರಿಸಿದರು. ಇದೇ ವೇಳೆ 3 ವಿಕಲಚೇತನರಿಗೆ ಬ್ಯಾಟರಿಚಾಲಿತ ವೀಲ್ ಚೇರ್ ವಿತರಿಸಿದರು. ನಂತರ ಸೆಪ್ಟೆಂಬರ್ 1 ರಿಂದ 30ರವರೆಗೆ ನಡೆಯಲಿರುವ ರಾಷ್ಟ್ರೀಯ ಪೋಷಣ್ ಮಾಸಾಚರಣೆಗೆ ಚಾಲನೆ ನೀಡಿದರು. ಪರಿಶೀಲನಾ ಸಭೆಯ ಆರಂಭಕ್ಕೂ ಮುನ್ನ ಸಚಿವೆ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅವರು ಸುಕನ್ಯಾ ಸಮೃದ್ಧಿ ಯೋಜನೆ ಪಾಸ್ ಬುಕ್ ವಿತರಣೆ, ಅಂಗನಾವಾಡಿ ಕಾರ್ಯಕರ್ತರಿಗೆ ನೇಮಕಾತಿ ಆದೇಶ, ಲಿಂಗತ್ವ ಅಲ್ಪಸಂಖ್ಯಾತ ಗುರುತಿನ ಚೀಟಿ ವಿತರಿಸಿದರು.

ಸಭೆಯಲ್ಲಿ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಟಿ.ರಘುಮೂರ್ತಿ, ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಶಾಸಕ ಬಿ.ಜಿ.ಗೋವಿಂದಪ್ಪ, ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಶಾಸಕ ಎಂ.ಚಂದ್ರಪ್ಪ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಗ್ಯಾರೆಂಟಿ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಬಿ.ಎನ್.ಮೈಲಾರಪ್ಪ, ಮಹಿಳಾ ಮತ್ತು ಮಕ್ಕಳ ಇಲಾಖೆ ನಿರ್ದೇಶಕ ಸಿದ್ದೇಶ್ವರ್, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ನಿರ್ದೇಶಕ ರಾಘವೇಂದ್ರ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಸೇರಿದಂತೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಪಿ.ಓ.ಪಿ ಗಣೇಶ ಬಳಸಿದರೆ ಕಾನೂನು ಕ್ರಮ

» ಚಿತ್ರದುರ್ಗ

ಸರ್ಕಾರ ಸೂಚನೆಯಂತೆ ಪಿ.ಓ.ಪಿ ಮತ್ತು ರಾಸಾಯನಿಕ ಗುಣವುಳ್ಳ ವಸ್ತುಗಳನ್ನು ಬಳಸಿ ಗಣಪತಿ ವಿಗ್ರಹಗಳ ತಾಯಾರಿಕೆ, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯನ್ನು ನಿಷೇಧಿಸಲಾಗಿದೆ. ಸಾರ್ವಜನಿಕರು ಪರಿಸರ ಸ್ನೇಹಿ, ಬಣ್ಣ ರಹಿತ, ಮಣ್ಣಿನ ಮೂರ್ತಿಗಳನ್ನು ಪ್ರತಿಷ್ಠಾಪಿಬೇಕು. ಸಾರ್ವಜನಿಕವಾಗಿ ಮೂರ್ತಿ ಪ್ರತಿಷ್ಠಾಪನೆ ಮೊದಲು ಸಕ್ಷಮ ಪ್ರಾಧಿಕಾರ ಅಥವಾ ಇಲಾಖೆಗಳಿಂದ ಅನುಮತಿ ಪಡೆಯಬೇಕು. ಗಣೇಶ ಉತ್ಸವಗಳಲ್ಲಿ ಏಕ ಬಳಕೆ ಪ್ಲಾಸ್ಟಿಕನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಸ್ವಚ್ಚತೆಯನ್ನು ಕಾಪಾಡುವುದು ದಿನನಿತ್ಯ ಉತ್ಪತ್ತಿಯಾಗುವ ತ್ಯಾಜ್ಯವನ್ನು ಪುರಸಭೆ ವಾಹನಕ್ಕೆ ನೀಡಬೇಕು. ಹೊಳಲ್ಕೆರೆ ಪಟ್ಟಣದಲ್ಲಿನ ಗಣೇಶ ವಿಸರ್ಜನೆಗಾಗಿ ಪುರಸಭೆಯಿಂದ ತಾಲ್ಲೂಕು ಪಂಚಾಯತ್ ಹಿಂಭಾಗದಲ್ಲಿರುವ ಎನ್.ಇ.ಎಸ್ ಕಾಲೋನಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ಇಲ್ಲಿಯೇ ಸ್ಥಳದಲ್ಲಿಯೇ ಗಣಪತಿ ವಿಗ್ರಹಗಳನ್ನು ವಿಸರ್ಜಿಸಬೇಕು. ಆದೇಶವನ್ನು ಮೀರಿ ಪಿ.ಓ.ಪಿ ಮತ್ತು ರಾಸಾಯನಿಕ ಗುಣವುಳ್ಳ ವಸ್ತುಗಳನ್ನು ಬಳಸಿ ವಿಗ್ರಹಗಳನ್ನು ತಯಾರಿಸುತ್ತಿರುವುದು ಮತ್ತು ಮಾರಾಟ ಮಾಡುತ್ತಿರುವುದು ಕಂಡುಬಂದಲ್ಲಿ ಅಥವಾ ನಿಗಧಿತ ಸ್ಥಳದಲ್ಲಿ ಬಿಟ್ಟು ಬೇರೆ ಕಡೆ ವಿಸರ್ಜನೆ ಮಾಡುತ್ತಿರುವುದು ತಿಳಿದುಬಂದಲ್ಲಿ, ಮೂರ್ತಿಗಳನ್ನು ವಶಪಡಿಸಿಕೊಳ್ಳುವುದಲ್ಲದೇ ದಂಡ ಕಾನೂನು ಕ್ರಮಕೈಗೊಳ್ಳಲಾಗುವುದು ಹೊಳಲ್ಕೆರೆ ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

### ಜಿಟಿಟಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನ


» ಚಿತ್ರದುರ್ಗ

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ (ಜಿಟಿಟಿಸಿ) ಕೇಂದ್ರದಲ್ಲಿ ಡಿಪ್ಲೋಮಾ ಕೋರ್ಸ್‍ಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್, ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ ಕೋರ್ಸ್‍ಗಳಿಗೆ ಎಸ್‍ಎಸ್‍ಎಲ್‍ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮತ್ತು ಪಿಯುಸಿ ಪಾಸ್, ಫೇಲ್ ಆದ ವಿದ್ಯಾರ್ಥಿಗಳನ್ನು ನೇರ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದೆ. ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಪ್ರವೇಶ ಪ್ರಕ್ರಿಯೆ ಮಾಡಲಾಗುತ್ತಿದೆ. ಸೆಪ್ಟೆಂಬರ್ 10 ಪ್ರವೇಶಾತಿಗೆ ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಕುಂಚಿಗನಾಳ್ ಕಣಿವೆ ಮಾರಮ್ಮ ದೇವಸ್ಥಾನ ಹಿಂಭಾಗದ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರಕ್ಕೆ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ: 9738465834, 9481866855, 9945646114 ಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### ಪ್ರಿಂಟಿಂಗ್‍ಪ್ರೆಸ್ ಮಾಲೀಕ ಕೆ.ನಾಗಭೂಷಣ್ ನಿಧನ

» ಚಳ್ಳಕೆರೆ

ನಗರದ ಶ್ರೀಕೃಷ್ಣ ಪ್ರಿಂಟರ್ಸ್ ಮಾಲೀಕ, ತಾಲ್ಲೂಕು ಮುದ್ರಣ ಮಾಲೀಕರ ಸಂಘದ ನಿರ್ದೇಶಕ, ನಂದಿನಿ ಹಾಲು ವಿತರಕರೂ ಆದ ಕೆ.ನಾಗಭೂಷಣ್(63) ಅನಾರೋಗ್ಯ ನಿಮಿತ್ತ ಬೆಂಗಳೂರಿನ ಖಾಸಗಿ



ಆಸ್ಪತ್ರೆಯಲ್ಲಿ ಸೋಮವಾರ ಮಧ್ಯಾಹ್ನ ಮೃತಪಟ್ಟಿರುತ್ತಾರೆ. ಕಳೆದ ಶುಕ್ರವಾರ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದ ಇವರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಪ್ರಿಂಟಿಂಗ್‍ಪ್ರೆಸ್ ಮೂಲಕ ತಮ್ಮ ವೃತ್ತಿಬದುಕನ್ನು ಆರಂಭಿಸಿದ ಇವರು ಕೆಲಕಾಲ ವಿವಿಧ ಕಂಪನಿಗಳ ಸಿಮೆಂಟ್ ವಿತರಕರೂ ಸಹ ಆಗಿದ್ದರು. ಮೃತರ ಅಂತ್ಯಕ್ರಿಯೆ ಬೆಂಗಳೂರಿನ ಚಾಮರಾಜಪೇಟೆಯ ರುದ್ರಭೂಮಿಯಲ್ಲಿ ನಡೆಯಿತು. ಸಂತಾಪ :- ಕೆ.ನಾಗಭೂಷಣ್(63) ನಿಧನಕ್ಕೆ ತಾಲ್ಲೂಕು ಬ್ರಾಹ್ಮಣ ಸಂಘ ಶೋಕ ವ್ಯಕ್ತಪಡಿಸಿದೆ. ಸಂಘದ ಅಧ್ಯಕ್ಷ ಅನಂತರಾಮ್‍ಗೌತಮ್, ಕಾರ್ಯದರ್ಶಿ ಎಂ.ಸತ್ಯನಾರಾಯಣರಾವ್, ನಿರ್ದೇಶಕರಾದ ಸಿ.ಎಸ್.ಗೋಪಿನಾಥ, ತಾಲ್ಲೂಕು ಮುದ್ರಣ ಮಾಲೀಕರ ಸಂಘದ ಅಧ್ಯಕ್ಷ, ಕಾರ್ಯದರ್ಶಿ, ಪದಾಧಿಕಾರಿಗಳು ನಾಗಭೂಷಣ್ ನಿಧನಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ. ಪತ್ನಿ ಶ್ರೀದೇವಿ, ಒರ್ವ ಪುತ್ರ, ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.

### ವಾಲ್ಮೀಕಿ ಸ್ಮರಣಾರ್ಥ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ರಾಜ್ಯ ಸರ್ಕಾರದ ವತಿಯಿಂದ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಬರುವ ಅಕ್ಟೋಬರ್ 17 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಗುತ್ತದೆ. ಈ ಜಯಂತಿ ಸಂಧರ್ಭದಲ್ಲಿ ಪರಿಶಿಷ್ಟ ಪಂಗಡ ಜನಾಂಗದ ಏಳಿಗೆಗಾಗಿ ಶ್ರಮಿಸಿದ ವ್ಯಕ್ತಿಗಳಿಗೆ ಹಾಗೂ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರೆ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಅರ್ಹ ವ್ಯಕ್ತಿಗಳಿಗೆ ಶ್ರೀ ಮಹರ್ಷಿ ವಾಲ್ಮೀಕಿ ರವರ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಕೊಠಡಿ ಸಂಖ್ಯೆ 45. ಎರಡನೇ ಮಹಡಿ. ಜಿಲ್ಲಾಡಳಿತ ಭವನ, ದಾವಣಗೆರೆ. ಇಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಕಛೇರಿ ಸಮಯದಲ್ಲಿ ಸೆ. 17 ರ ಒಳಗಾಗಿ ಸಲ್ಲಿಸತಕ್ಕದ್ದು.

# ಭಾರತ ದಾರ್ಶನಿಕರ, ಸಂತರ, ಶರಣರ ನಾಡು

» ಚಿತ್ರದುರ್ಗ

ಭಾರತ ದೇಶ ಪುಣ್ಯ ಭೂಮಿಯಾಗಿದೆ. ದಾರ್ಶನಿಕರ, ಸಂತರ, ಶರಣರ ನಾಡಾಗಿದೆ ಇಲ್ಲಿ ಶಾಂತಿಯನ್ನು ಬಯಸುವವರ ಸಂಖ್ಯೆ ಹೆಚ್ಚಿದೆ. ನಮ್ಮಲ್ಲಿ ಕೆಟ್ಟ ಗುಣಗಳನ್ನು ದೂರ ಮಾಡುವುದರ ಮೂಲಕ ಉತ್ತಮವಾದ ರಾಷ್ಟ್ರವನ್ನಾಗಿ ಮಾಡಬೇಕಿದೆ ಎಂದು ಶ್ರೀ ಕಬೀರಾನಂದ ಆಶ್ರಮದ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು ತಿಳಿಸಿದರು.

ನಗರದ ಶ್ರೀ ಸದ್ಗುರು ಕಬೀರಾನಂದಾಶ್ರಮದ ಆವರಣದಲ್ಲಿ ವಿಶ್ವ ಹಿಂದು ಪರಿಷದ್ ಸ್ಥಾಪನ ದಿನ ಹಾಗೂ "ಷಷ್ಠಿಪೂರ್ತಿ ಸಮಾರೋಪ ಸಂಭ್ರಮದ ಧಾರ್ಮಿಕ ಸಭಾ ಕಾರ್ಯಕ್ರಮ ಹಾಗೂ ಶ್ರೀಕೃಷ್ಣನ ವೇಷಭೂಷಣ ಕಾರ್ಯಕ್ರಮದ ಪ್ರಯುಕ್ತ ಭಾನುವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಇತರೆ ರಾಷ್ಟ್ರಗಳಿಗೆ ಹೋಲಿಸಿದರೆ ನಮ್ಮ ದೇಶದಲ್ಲಿ ಸಂಸ್ಕಾರ ಹೆಚ್ಚಾಗಿದೆ ಇದರಿಂದ ಇಲ್ಲಿ ಇನ್ನು ಸಂಬಂಧಗಳು ಉಳಿದಿವೆ. ಮನೆಯಲ್ಲಿ ಪೋಷಕರಿಗೆ, ಶಾಲೆಯಲ್ಲಿ ಗುರುಗಳಿಗೆ ವಿಧೇಯರಾಗಿ ನಡೆಯಬೇಕಿದೆ. ನಮ್ಮ ಭಾರತ ದೇಶ ಶಾಂತಿಯುತವಾದ ದೇಶವಾಗಿದೆ ಇಲ್ಲಿ ಹಿಂಸೆಗೆ ಜಾಗ ಇಲ್ಲದೆ ಅಹಿಂಸೆಯಿಂದ ಎಲ್ಲವನ್ನು ಪಡೆಯಬಹುದಾಗಿದೆ. ವಿಶ್ವ ಹಿಂದೂ ಪರಿಷದ್ ದೇಶದಲ್ಲಿ ಹಿಂದುತನವನ್ನು ಕಾಪಾಡುವ ಕಾರ್ಯವನ್ನು ಮಾಡುತ್ತಿದೆ. ಇದಕ್ಕೆ ಎಲ್ಲರು ಕೈ ಜೋಡಿಸಬೇಕಿದೆ ಎಂದು ತಿಳಿಸಿದರು.



ಕರ್ನಾಟಕ ದಕ್ಷಿಣದ ಬಜರಂಗದಳದ ಪ್ರಾಂತ ಸಂಯೋಜಕರಾದ ಪ್ರಭಂಜನ್ ಮಾತನಾಡಿ, ಧರ್ಮೋ ರಕ್ಷತಿ ರಕ್ಷಿತ: ಅನ್ನುವ ಧ್ಯೆಯ ವಾಕ್ಯದೊಂದಿಗೆ 1964ರ "ಶ್ರೀ ಕೃಷ್ಣ ಜನ್ಮಾಷ್ಟಮಿಯ" ಪರ್ವ ಕಾಲದಲ್ಲಿ ಸ್ಥಾಪಿಸಲ್ಪಟ್ಟ ವಿಶ್ವ ಹಿಂದೂ ಪರಿಷದ್ ಈಗ ಷಷ್ಟಿಪೂರ್ತಿ ಸಂಭ್ರಮ, ಸಮಸ್ತ ಹಿಂದೂ ಸಮಾಜದ ಅಸಮಾನತೆಯ ಭಾವನೆ ತೊಲಗಿಸಿ ನಾವೆಲ್ಲ ಹಿಂದು ನಾವೆಲ್ಲ ಒಂದು ಎಂಬ ಭಾವನೆ ಮೂಡಿಸಿ ವಿಶ್ವದೆಲ್ಲೆಡೆ ಸನಾತನ ಧರ್ಮದ ಹಿರಿಮೆಯನ್ನು ಪಸರಿಸಿ, ಸಂರಕ್ಷಣೆಯನ್ನು ಮಾಡಿ ನಿರಂತರ ಸೇವೆ ಸಲ್ಲಿಸುತ್ತಿರುವ ಈ ಸಂಘಟನೆಯ 60ನೇ ವರ್ಷದ ಆಚರಣೆ ನಡೆಯುತ್ತಿದೆ. ಹಿಂದೂಗಳ ರಕ್ಷಣೆಗಾಗಿ ವಿಶ್ವ ಹಿಂದೂ ಪರಿಷದ್ ಪೂರ್ಣ ಪ್ರಮಾಣದಲ್ಲಿ ಕೆಲಸವನ್ನು ಮಾಡುತ್ತಿದೆ. ರಾಮ ಮಂದಿರವ ನಿರ್ಮಾಣದಲ್ಲಿ ಇದರ ಪಾಲು ಇದೆ. ಇದ್ದಲ್ಲದ ಭಯೋತ್ಪಾದಕರ ವಶದಲ್ಲಿದ್ದ ಅಮರನಾಥ್ ದೇವಾಲಯವನ್ನು ಭಕ್ತರು ಸದಾ ಹೋಗುವಂತೆ ಮಾಡಲಾಗಿದೆ ಇವೆಲ್ಲಾ ವಿಎಚ್.ಪಿ.ಯ ಕೂಡುಗೆಗಳಾಗಿವೆ ಎಂದರು.

ಹಿಂದುಗಳನ್ನು ರಕ್ಷಣೆ ಮಾಡುವುದು ಹಿಂದು ಧರ್ಮಕ್ಕೆ ಆಪತ್ತು ಬಂದಾಗ ರಕ್ಷಣೆ ಮಾಡುವುದು ಅಲ್ಲದೆ ಗುಡ್ಡುಗಾಡು ಪ್ರದೇಶದ ಮಕ್ಕಳಿಗೆ ಶಿಕ್ಷಣ ಹಾಗೂ ಆರೋಗ್ಯವನ್ನು ಸಹಾ ನೀಡಲಾಗಿದೆ. ನಮ್ಮ ಮಕ್ಕಳನ್ನು ಅಂಕಗಳಿಸುವ ಕೇಂದ್ರಗಳನ್ನಾಗಿ ಮಾತ್ರ ಮಾಡಲಾಗುತ್ತಿದೆ ಅವರಲ್ಲಿ ಸಂಸ್ಕಾರವನ್ನು ಕಲಿಸುವ ನಿಟ್ಟಿನಲ್ಲಿ ಹಿಂದೆ ಇದ್ದೇವೆ ಮಕ್ಕಳಿಗೆ ಸಂಸ್ಕಾರವನ್ನು ನೀಡಿದೆ ಉತ್ತಮ ಪ್ರಜೆಗಳಾಗಲು ಸಾಧ್ಯವಿದೆ ಎಂದ ಅವರು, ಮಕ್ಕಳನ್ನು ಧರ್ಮ ಕಾರ್ಯಕ್ಕೆ ತೂಡಗಿಸಬೇಕಿದೆ, ಸಂಸ್ಕಾರವನ್ನು ಕಲಿತ ಮಕ್ಕಳಿಗೆ ಎಲ್ಲಿಯೂ ಸಹಾ ಗೌರವ ಸಿಗುತ್ತದೆ, ಬೇರೆ ದೇಶಗಳಲ್ಲಿಯೂ ಸಹಾ ಸನ್ಮಾನಗಳು ಆಗುತ್ತವೆ, ದೇಶದ ಬಗ್ಗೆ ಕಾಳಜಿವಹಿಸುತ್ತಾರೆ ಕೃಷ್ಣನ ವೇಷವನ್ನು ಹಾಕಿಸಿರುವ ತಾಯಂದಿರುಗಳು ಆತನ ಬಗ್ಗೆ ತಮ್ಮ ಮಕ್ಕಳಿಗೆ ತಿಳಿಸುವ ಕೆಲಸವನ್ನು ಮಾಡಿ ಧರ್ಮವನ್ನು ನಾವುಗಳು ರಕ್ಷಣೇ ಮಾಡಿದರೆ ಅದು ನಮ್ಮನ್ನು ರಕ್ಷಣೆ ಮಾಡುತ್ತದೆ ಎಂದು ತಿಳಿಸಿದರು.

ಟಾರ್ಗೆಟ್ ಯುವ ವೇದಿಕೆಯ ಅಧ್ಯಕ್ಷರಾದ ಸಿದ್ದರಾಜ್ ಜೋಗಿ ಮಾತನಾಡಿ, ಕೃಷ್ಣಜಯಂತಿಯ ಅಂಗವಾಗಿ ಅತನ ರೀತಿಯಲ್ಲಿ ವೇಷಭೂಷಣಗಳನ್ನು ತೊಡುವುದು ಮಾತ್ರವಲ್ಲ ಆತನ ಬಗ್ಗೆ ಮಕ್ಕಳಿಗೆ ತಿಳಿಸುವ ಕಾರ್ಯವನ್ನು ಮಾಡಿದಾಗ ಮಾತ್ರ ನಿಜವಾದ ಅರ್ಥದಲ್ಲಿ ಜಯಂತಿ ಆಚರಣೆಯಾಗುತ್ತದೆ. ದ್ವಾಪರಯುಗದಲ್ಲಿ ಶ್ರೀಕೃಷ್ಣ ತಿಳಿಸಿದ ತತ್ವಗಳು ಸಂದೇಶಗಳು ನಮ್ಮ ಬದುಕಿಗೆ ಮಾರ್ಗದರ್ಶನವಾಗಬೇಕಿದೆ. ದೇಶ ಮತ್ತ ಸಮಾಜದ ಸೇವೆಯಲ್ಲಿ ನೆಮ್ಮದಿಯನ್ನು ಕಾಣಬಹುದಾಗಿದೆ. ಪೋಷಕರು ತಮ್ಮ ಮಕ್ಕಳಿಗೆ ಆಂಕಗಳಿಸುವ ಯಂತ್ರಗಳನ್ನಾಗಿ ಮಾಡದೇ ಅವರಲ್ಲಿ ಸಂಸ್ಕಾರವನ್ನು ತುಂಬುವ ಕಾರ್ಯವನ್ನು ಮಾಡಬೇಕಿದೆ ಎಂದರು.

ಕಾಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಶಾರದ ಬ್ರಾಸ್ ಬ್ಯಾಂಡ್‍ನ ಹಿರಿಯ ಸಂಗೀತ ಕಲಾವಿದರಾದ ಎಸ್.ವಿ. ಗುರುಮೂರ್ತಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಯೋಗ ಆಚಾರ್ಯರು ಮತ್ತು ಚಿತ್ರದುರ್ಗ ಜಿಲ್ಲಾ ಯೋಗಾಸನ ಕ್ರೀಡಾ ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷರಾದ ಎಲ್.ಎಸ್. ಚಿನ್ಮಯಾನಂದ. ವಿಗ್ರಹ ಶಿಲ್ಪಿಗಳಾದ ಕೀರ್ತಿ ನಂಜುಂಡಸ್ವಾಮಿ, ವಿಶ್ವ ಹಿಂದು ಪರಿಷದ್‍ನ ಚಿತ್ರದುರ್ಗ ನಗರ ಅಧ್ಯಕ್ಷರಾದ ಅಶೋಕ್ ಕುಮಾರ್ ಈ. ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಮಕ್ಕಳು ಕೃಷ್ಣ ಮತ್ತು ರಾಧೆಯ ವೇಷಭೂಷಣವನ್ನು ಧರಿಸಿದ್ದರು. ಗಂಗಾಧರ್ ಪ್ರಾರ್ಥಿಸಿದರೆ, ಚನ್ನಕೇಶವ ಸ್ವಾಗತಿಸಿದರು.

# ವಯೋ ಸಹಜ ಕಾಯಿಲೆಗಳಿಗೆ ಆಯುರ್ವೇದ ಚಿಕಿತ್ಸೆ ಪರಿಣಾಮಕಾರಿ

» ಹೊಸದುರ್ಗ

ಮನುಷ್ಯನ ವಯಸ್ಸು 50 ದಾಟಿದ ಮೇಲೆ ಉಪಹಾರ ಸೇವಿಸುವ ವಿಚಾರದಲ್ಲಿ ಹಾಗೂ ಆರೋಗ್ಯ ಕಾಪಾಡಿಕೊಳ್ಳುವ ವಿಚಾರದಲ್ಲಿ ತುಂಭಾ ಜಾಗ್ರತರಾಗಿರಬೇಕು, ಹಿರಿಯ ನಾಗರೀಕರಲ್ಲಿ ಕಂಡು ಬರುವ ವಯೋ ಸಹಜ ಕಾಯಿಲೆಗಳಿಗೆ ಆಯುರ್ವೇದ ಚಿಕಿತ್ಸೆ ಪರಿಣಾಮಕಾರಿಯಾಗಿದ್ದು ಈ ಚಿಕಿತ್ಸೆಯನ್ನು ಪಡೆದುಕೊಳ್ಳುವಂತೆ ವೈದ್ಯಾಧಿಕಾರಿ ಡಾಕ್ಟರ್ ನದಾಫ್ ತಿಳಿಸಿದರು



ಪಟ್ಟಣದ ಹೊನ್ನಮ್ಮ ಬಡಾವಣೆಯಲ್ಲಿ ಹಿರಿಯ ನಾಗರೀಕರ ದಿನಾಚರಣೆಯ ಅಂಗವಾಗಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಮತ್ತು ಆಯುರ್ವೇದ ಔಷಧ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಆಯುರ್ವೇದ ಘಟಕದ ಗುತ್ತಿಗೆ ತಜ್ಞ ವೈದ್ಯ ಡಾಕ್ಟರ್ ಪವನ್ ಕುಮಾರ್ ಸಫಾರೆ ಮಾತನಾಡಿ ವೃದ್ಧರಲ್ಲಿ ಬರುವಂತಹ ಸಂಧಿವಾತ, ಮಲಬದ್ಧತೆ, ಅನಿದ್ರೆ, ಮಧುಮೇಹ, ಅಧಿಕ ರಕ್ತದೊತದ ಇತ್ಯಾದಿ ಕಾಯಿಲೆಗಳಿಗೆ ಲಘುವಾದ ಆಹಾರ, ನಿಯಮಿತವಾದ ವ್ಯಾಯಾಮ ಪ್ರಾಣಾಯಾಮ ಮತ್ತು ಆಯುರ್ವೇದ ಚಿಕಿತ್ಸೆಯನ್ನು ತೆಗೆದುಕೊಳ್ಳುವದರಿಂದ ಉತ್ತಮ ಆರೋಗ್ಯವನ್ನು ಪಡೆಯಬಹುದು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯದೀಶರಾದ ಹೆಚ್. ಬಿಲ್ಲಪ್ಪ ಮಾತನಾಡಿ ವಯೋ ಸಹಜವಾಗಿ ಬರುವ ಚಿಂತೆ ಮಾನಸಿಕ ಒತ್ತಡವನ್ನು ಭಯ ಅಸೂಯೋ ಬೇಸರದಂತೆ ಮನಸ್ಥಿತಿಯಲ್ಲಿ ಪಡೆಯಲು ಪ್ರಾಣಾಯಾಮ ಮತ್ತು ಪರಸ್ಪರ ಆತ್ಮೀಯ ಭಾವ ಇರುವುದು ಮುಖ್ಯ ಎಂದು ತಿಳಿಸಿದರು

ಕಾರ್ಯಕ್ರಮದಲ್ಲಿ ಬಿ. ಕೆ.ನಾಗರಾಜಪ್ಪ, ಬಸವರಾಜರೆಡ್ಡಿ, ಗುರು ಬಸವರಾಜ, ವಿಜಯಕುಮಾರಿ, ಭರತ್, ಗಿರೀಶ್, ಕಿರಣ್, ಶಿಲ್ಪ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ , ಆಯುಷ್ ಇಲಾಖೆ ಚಿತ್ರದುರ್ಗ, ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ ಮತ್ತು ಕ್ಷೇಮ ಕೇಂದ್ರ ಕೊಂಗುವಳ್ಳಿ, ಹಾಗೂ ಸರ್ಕಾರಿ ಆಯುರ್ವೇದ ಘಟಕ ಹೊಸದುರ್ಗ, ಇವರ ಸಹಯೋಗದಲ್ಲಿ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿತ್ತು

## ನ್ಯಾಯಬೆಲೆ ಅಂಗಡಿಯಲ್ಲಿ ಕಾರ್ಡ್‍ದಾರರಿಗೆ ತೂಕ ವಂಚನೆ

**ನ್ಯಾಯಬೆಲೆ ಅಂಗಡಿ ಅಮಾನತು ಮಾಡಲು ಸ್ಥಳದಲ್ಲೆ ಆದೇಶ ನೀಡಿದ ಡಿಸಿ ಗಂಗಾಧರಸ್ವಾಮಿ**




» ದಾವಣಗೆರೆ

ನ್ಯಾಮತಿ ತಾಲ್ಲೂಕಿನ ಬಸವನಹಳ್ಳಿಯಲ್ಲಿನ ಸರ್ಕಾರಿ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರ ಚೀಟಿದಾರರಿಗೆ ತೂಕದಲ್ಲಿ ವಂಚನೆ ಮಾಡಿದ ಪ್ರಕರಣದಡಿ ಸ್ಥಳದಲ್ಲೆ ನ್ಯಾಯಬೆಲೆ ಅಂಗಡಿ ಅಮಾನತು ಮಾಡಲು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶ ನೀಡಿದ್ದಾರೆ. ಜಿಲ್ಲಾಧಿಕಾರಿಯವರು ಆಗಸ್ಟ್ 31 ರಂದು ಹೊನ್ನಾಳಿಗೆ ಭೇಟಿ ನೀಡಿ ದುರಸ್ಥಿಯಾದ ಕಾಲುವೆ ವೀಕ್ಷಣೆಯಾಗಿ ಬಸವನಹಳ್ಳಿ ಮಾರ್ಗವಾಗಿ ತೆರಳಿದ್ದಾರೆ. ಅಲ್ಲಿ ನ್ಯಾಯಬೆಲೆ ಅಂಗಡಿ ನೋಡಿದ ಜಿಲ್ಲಾಧಿಕಾರಿಯವರು ತಮ್ಮ ವಾಹನ ನಿಲ್ಲಿಸಿ ಅಂಗಡಿಗೆ ತೆರಳಿದಾಗ ಅಲ್ಲಿ ಓರ್ವ ಮಹಿಳೆ ಪಡಿತರ ಧಾನ್ಯಗಳನ್ನು ಪಡೆದುಕೊಂಡಿದ್ದರು. ಅವರನ್ನು ಮಾತನಾಡಿಸಿ ನಿಮ್ಮ ಮನೆಯಲ್ಲಿ ಎಷ್ಟು ಸದಸ್ಯರಿದ್ದಾರೆ, ಎಷ್ಟು ಆಹಾರಧಾನ್ಯ ನೀಡುತ್ತಿದ್ದಾರೆ ಎಂದು ಮಾಹಿತಿ ಪಡೆದುಕೊಂಡರು. ಮಹಿಳೆ ಮೂರು ಕೆ.ಜಿ.ಅಕ್ಕಿ ಹಾಗೂ 2 ಕೆ.ಜಿ ರಾಗಿ ಪಡೆಯಲಾಗಿದೆ ಎಂದಾಗ ತೂಕದ ನಿಖರತೆ ಪರೀಕ್ಷೆ ಮಾಡಲು ಮರು ತೂಕ ಮಾಡಲು ತಿಳಿಸಿದರು. ಒಟ್ಟು ಆಹಾರ ಧಾನ್ಯ ಐದು ಕೆಜಿ ನೀಡಬೇಕಿದ್ದು ಇದು 4 ಕೆಜಿ 300 ಗ್ರಾಂ ತೂಕ ಮಾತ್ರ ಬಂದಿದೆ. ಪಡಿತರರಿಗೆ 700 ಗ್ರಾಂ ತೂಕದಲ್ಲಿ ಮೋಸ ಮಾಡಲಾಗಿದೆ ಎಂದು ಅರಿತ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿಯವರು ಸ್ಥಳದಲ್ಲಿಯೇ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿ ಈ ನ್ಯಾಯಬೆಲೆ ಅಂಗಡಿಯನ್ನು ಅಮಾನತು ಮಾಡಲು ಸೂಚನೆ ನೀಡಿದರು.

ಈ ವೇಳೆ ಹೊನ್ನಾಳಿ ಉಪವಿಭಾಗಾಧಿಕಾರಿ ಅಭಿಷೇಕ್ ಹಾಗೂ ತಹಶೀಲ್ದಾರ್ ಉಪಸ್ಥಿತರಿದ್ದರು.

## ಸಮಾಜ ಕಲ್ಯಾಣ ಇಲಾಖೆ ನೀಡುವ ಪ್ರೋತ್ಸಾಹಧನಕ್ಕಾಗಿ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನಕ್ಕಾಗಿ ಆನ್‍ಲೈನ್‍ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಸಮಾಜ ಕಲ್ಯಾಣ ಇಲಾಖಾ ವೆಬ್ ಸೈಟ್ ತಿತಿತಿ.ತಿ.ಇಚಿಡಿ.ಟಿಥಿ.ಟಿ ನಲ್ಲಿ ಅರ್ಜಿ ಸಲ್ಲಿಸಬಹುದು. ಆಧಾರ್ ಸಂಖ್ಯೆಯನ್ನು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿಸಬೇಕು. ಜಾತಿ ಪ್ರಮಾಣ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಬ್ಯಾಂಕ್ ಪಾಸ್‍ಬುಕ್ ಜೆರಾಕ್ಸ್, ಆಧಾರ್ ಕಾರ್ಡ್ ಜೆರಾಕ್ಸ್‍ಗಳ ದೃಢೀಕೃತ ಪ್ರತಿ ಹಾಗೂ ಅರ್ಜಿ ಹಾಕಿದ ಪ್ರತಿಯನ್ನು ಮುಖ್ಯೋಪಾಧ್ಯಾಯರ ದೃಢೀಕರಣದೊಂದಿಗೆ ಸಂಬಂಧಿಸಿದ ತಾಲ್ಲೂಕುಗಳ ಸಹಾಯಕ ನಿರ್ದೇಶಕರ ಕಚೇರಿ, ಅಥವಾ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ-37. ಮೊದಲನೇ ಮಹಡಿ, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಸಲ್ಲಿಸಬೇಕೆಂದು ಜಂಟಿ ನಿರ್ದೇಶಕ ನಾಗರಾಜ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಕೆಳಗೋಟೆ ಬಾರ್ ಲೈನ್ ಶಾಲೆಯಲ್ಲಿ ಸಾಂಸ್ಕೃತಿಕ ಸಂಭ್ರಮ

# ಸರ್ಕಾರಿ ಶಾಲೆ ಉಳಿಸಿ ಬೆಳೆಸೋಣ: ಗೀತಾ ಭರಮಸಾಗರ

» ಚಿತ್ರದುರ್ಗ

ಸರ್ಕಾರಿ ಶಾಲೆ ಉಳಿಸಿ ಅಭಿಯಾನ"ದಡಿ ಶತಮಾನೋತ್ಸವದಲ್ಲಿರುವ ಚಿತ್ರದುರ್ಗ ನಗರದ ಸರ್ಕಾರಿ ಪ್ರಾಥಮಿಕ ಶಾಲೆ ಕೆಳಗೋಟೆ ( ಬಾರ್ ಲೈನ್) ಶಾಲೆಯನ್ನು ವಿಶೇಷವಾಗಿ ಅಭಿವೃದ್ಧಿ ಮಾಡಿ ಜಿಲ್ಲೆಯಲ್ಲಿಯೇ ಮಾದರಿ ಶಾಲೆಯಾಗಿ ಮಾಡಲು ಋಷಿ ಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ಸಂಪೂರ್ಣ ಜವಾಬ್ದಾರಿ ತೆಗೆದುಕೊಂಡಿದ್ದು ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಪಣ ತೊಟ್ಟಿರುವುದು ಅತ್ಯಂತ ಶ್ಲಾಘನೀಯ ಎಂದು ಕರ್ನಾಟಕ ರಾಜ್ಯ ಶಿಕ್ಷಣ ಪರಿಷತ್ತು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೀತಾ ಭರಮಸಾಗರ ಹೇಳಿದರು.

ಶಾಲಾ ಶಿಕ್ಷಣ ಇಲಾಖೆ ಚಿತ್ರದುರ್ಗ ಜಿಲ್ಲೆ, ಉಪ ನಿರ್ದೇಶಕರ ಕಚೇರಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ತಾಲ್ಲೂಕು. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೆಳಗೋಟೆ (ಬಾರ್ ಲೈನ್ ) ಚಿತ್ರದುರ್ಗ. ಋಷಿ ಸಂಸ್ಕೃತಿ ಗುರುಕುಲ ಮಹಾಸಂಸ್ಥಾನ ನೇತೃತ್ವದಲ್ಲಿ



ವಯೋಸಹಜ ನಿವೃತ್ತಿ ಹೊಂದಿದ ಶಿಕ್ಷಕಿಯಾದ ಜಿ.ಕೆ. ಶಕುಂತಲ ಅವರಿಗೆ ಬೀಳ್ಕೊಡುಗೆ ಸಮಾರಂಭ ಮತ್ತು ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ವೆಂದರೆ ಚಾರಿತ್ರ್ಯೆಯ ನಿರ್ಮಾಣವಾಗಿದ್ದು ಜಗತ್ತಿನಲ್ಲಿ ಎಲ್ಲರಿಗಿಂತ ವಿದ್ಯೆಯನ್ನು ಕಲಿಸುವ ಗುರುವಿನ ಸ್ಥಾನ ಅತ್ಯಂತ ಶ್ರೇಷ್ಠತೆ ಹೊಂದಿದೆ ಗುರುಗಳೇ ಮೊದಲ ಪೋಷಕರು. ಪ್ರಮುಖವಾಗಿ ಸರ್ಕಾರಿ ಶಾಲೆಗಳ ಶಿಕ್ಷಕ ವರ್ಗ ಕೇವಲ ಪಾಠಮಾಡುವ ಬದಲು ಶಾಲೆಯ ಅಭಿವೃದ್ಧಿಯ ಬಗ್ಗೆಯೂ ಹೆಚ್ಚು ಗಮನಹರಿಸಬೇಕು. ಈ ಶಾಲೆಯ ಮಕ್ಕಳ ಹಿನ್ನೆಲೆ ನೋಡಿದಾಗ ಕಣ್ಣಂಚಿನಲಿ ತೇವವಾಗುತ್ತವೆ. ಇಂತಹ ಮಕ್ಕಳಿಗೆ ಸರ್ಕಾರ ಎಲ್ಲಾ ಸೌಲಭ್ಯಗಳನ್ನು ಕೊಡಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ( ಎಸ್ ಡಿ ಎಂ ಸಿ) ಅಧ್ಯಕ್ಷೆ ವರಲಕ್ಷ್ಮಿ ಮಾತನಾಡಿ, ಶಾಲೆಯ ಕಟ್ಟಡಗಳು, ಕಿಡಕಿ ಬಾಗಿಲು, ಮೇಲ್ಚಾವಣಿ, ಕಾಂಪೌಂಡ್, ಶೌಚಾಲಯ ಸಂಪೂರ್ಣ ಹಾಳಾಗಿದ್ದು ಮಕ್ಕಳಿಗೆ ಅಧ್ಯಯನದ ವಾತಾವರಣದ ಮರು ನಿರ್ಮಾಣವಾಗಬೇಕು, ಸರ್ಕಾರಿ ಶಾಲೆಗಳು ಖಾಸಗಿ ಶಾಲೆಗಳ ಆರ್ಭಟದೊಳಗೆ ನಲುಗಿ ಹೋಗಿವೆ ಅದನ್ನು ಬದಲಾವಣೆ ಮಾಡಲು ಶಾಲೆಯನ್ನು ದತ್ತು ಪಡೆದ ಋಷಿಸಂಸ್ಕೃತಿ ಗುರುಕುಲ ಮಹಾಸಂಸ್ಥಾನಕ್ಕೆ ಎಸ್ ಡಿ ಎಂ ಸಿ ಸಮಿತಿ ಅಭಾರಿಯಾಗಿದ್ದೇವೆ ಎಂದರು. ಋಷಿ ಸಂಸ್ಕೃತಿ ಗುರುಕುಲ ಮಹಾಸಂಸ್ಥಾನದ ಆಡಳಿತಾಧಿಕಾರಿಗಳಾದ ಮಾಲತೇಶ್ ಅರಸ್, ಮಾತನಾಡಿ ಸರ್ಕಾರಿ ಶಾಲೆ ಉಳಿಸಿ ಅಭಿಯಾನ ರಾಜ್ಯ ಮಟ್ಟದಲ್ಲಿ ನಡೆಯಲಿದ್ದು ಚಿತ್ರದುರ್ಗ ದಾವಣಗೆರೆ ತುಮಕೂರು ಜಿಲ್ಲೆಯಲ್ಲಿ ಹೊಸ ಬದಲಾವಣೆಗೆ ಕೈ ಹಾಕಿದೆ. ತಾಲೂಕಿಗೊಂದು ಸರ್ಕಾರಿ ಶಾಲೆಯನ್ನು ಮಾದರಿ ಮಾಡಲು ಪಣ ತೊಟ್ಟಿದ್ದು ಶಾಲೆಯ ಹಳೆಯ ವಿದ್ಯಾರ್ಥಿಗಳ ಮೂಲಕ "ನಮ್ಮ ಶಾಲೆ ನಮ್ಮ ಕೊಡುಗೆ" ಯಾಗಿ ಶಾಲೆಯ ಅಭಿವೃದ್ಧಿ ನಮ್ಮ ಕಾಯಕವಾಗಿದ್ದು, ಡಿಡಿಪಿಐ ಮತ್ತು ಬಿಇಒ ಅವರ ಮಾರ್ಗದರ್ಶನ ಅಗತ್ಯ ಎಂದರು.

## ಫಾಸ್ಟ್ ನ್ಯೂಸ್

### ನಗರದೆಲ್ಲೆಡೆ ಶ್ರೀಗಣೇಶ ಪ್ರತಿಮೆಗಳ ಕಾರುಬಾರು : ಜನರಲ್ಲಿ ಹೆಚ್ಚಿದ ಉತ್ಸಾಹ.

» ಚಳ್ಳಕೆರೆ

ನಗರವೂ ಸೇರಿದಂತೆ ತಾಲ್ಲೂಕಿನಾದ್ಯಂತ ಶ್ರೀಗಣೇಶ ಚತುರ್ಥಿಹಬ್ಬವನ್ನು ಸಂಭ್ರಮ ಸಡಗರಗಳಿಂದ ಆಚರಿಸಲು ಸಿದ್ದತೆಗಳು ಭರದಿಂದ ಸಾಗಿವೆ. ಪ್ರಸ್ತುತ ವರ್ಷವೂ ಸಹ ರಾಜ್ಯದ ಬೇರೆ, ಬೇರೆ ಜಿಲ್ಲೆಗಳಿಂದ ವಿವಿಧ ಆಕೃತಿಯ, ಬಣ್ಣ, ಬಣ್ಣದ ಗಣೇಶನ ಮೂರ್ತಿಗಳು ನಗರದ ಪ್ರಮುಖ ರಸ್ತೆಗಳಲ್ಲಿ ರಾರಾಜಿಸುತ್ತಿದ್ದು, ಭಕ್ತರು ಗಣೇಶನ ಮೂರ್ತಿಯನ್ನು ಖರೀದಿಸಲು ಸಿದ್ದತೆ ನಡೆಸಿದ್ದಾರೆ.ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಗಣೇಶನ ಪ್ರತಿಮೆಗಳನ್ನು ಲಾರಿಯಿಂದ ಕೆಳಗೆ ಇಳಿಸಿ ಸಾಲಾಗಿ ಜೋಡಿಸಿ ಸುಲಭವಾಗಿ ಜನರು ಗಣೇಶನ ಪ್ರತಿಮೆಯನ್ನು ಖರೀದಿಸಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಲಾಗಿದೆ. ಇನ್ನೂ ಒಂದೆರಡು ದಿನಗಳಲ್ಲಿ ಹೆಚ್ಚಿನ ಪ್ರಮಾಣದ ಗಣೇಶ ಮೂರ್ತಿಗಳು ಆಗಮಿಸುವ ನಿರೀಕ್ಷೆ ಇದ್ದು, ಈ ಬಾರಿ ಎಲ್ಲೆಡೆ ಉತ್ತಮ ಮಳೆಯಾಗಿದ್ದು, ಗೌರಿ, ಗಣೇಶನನ್ನು ಪೂಜಿಸಲು ಭಕ್ತರು ಉತ್ಸಹಾದಿಂದ ಕಾಯುತ್ತಿದ್ದಾರೆ. ನಗರದ ವಿವಿಧ ಸಂಘ ಸಂಸ್ಥೆಯವರು ಸಹ ಗಣೇಶ ಹಬ್ಬದ ಹಿನ್ನಲೆಯಲ್ಲಿ ಹಲವಾರು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದಾರೆ. ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಗಣೇಶನ ಪೇಂಡಾಲ್ ನಿರ್ಮಾಣ ಕಾರ್ಯ ಭರದಿಂದ ಸಾಗುತ್ತಿದೆ. ಸುತ್ತಲು ವಿವಿಧ ಆಟಿಕೆ, ರಾಟೆ ಮುಂತಾದ ಮನೋರಂಜನಾ ನೀಡುವ ಸಾಮಾಗ್ರಿಗಳು ಸಿದ್ದಗೊಳ್ಳುತ್ತಿವೆ. ನಗರದ ಎಲ್ಲಾ ರಸ್ತೆಗಳಲ್ಲೂ ಸುಮಾರು 60ಕ್ಕೂ ಹೆಚ್ಚು ಗಣೇಶನ ವಿಗ್ರಹದ ಮಾರಾಟಗಾರರು ನೂರಾರು ಸಂಖ್ಯೆಯಲ್ಲಿ ಸಿದ್ದಪಡಿಸಿ ಗಣೇಶನ ಮೂರ್ತಿಯನ್ನು ತಂದಿಟ್ಟಿದ್ದಾರೆ. ಜನರು ಉತ್ಸಾಹದಿಂದ ಮೂರ್ತಿಯನ್ನು ವೀಕ್ಷಿಸಿಸುತ್ತಿದ್ದಾರೆ. ಆದರೆ, ಈ ಬಾರಿ ಗಣೇಶ ದರ ಭಕ್ತರನ್ನು ದಂಗುಬಡಿಸುತ್ತಿದೆ. ಚಿಕ್ಕ, ಚಿಕ್ಕ ಮೂರ್ತಿಗಳು ಸಹ 400ರಿಂದ500ರೂ, ದೊಡ್ಡ ಗಣೇಶನಿಗೆ 3ರಿಂದ5 ಸಾವಿರ ದರವನ್ನು ಮಾರಾಟಗಾರರು ನಿಗದಿಪಡಿಸಿದ್ದಾರೆ. ಆದರೆ, ಗಣೇಶನನ್ನು ಕೊಳ್ಳಲು ಬಂದ ಬಹುತೇಕ ಜನ ಮಳೆ, ಬೆಳೆ ಇಲ್ಲದೆ ಕಂಗಾಲಾಗಿರುವ ಭಕ್ತರಿಗೆ ಗಣೇಶಮೂರ್ತಿಯ ದರ ಹೆಚ್ಚು ನೋವು ಪಡುವಂತೆ ಮಾಡಿದೆ. ಆದರೂ ವಿಘ್ನನಿವಾರಕ ಶ್ರೀಗಣೇಶನನ್ನು ಪೂಜಿಸಬೇಕಿದೆ.

### ರಾಜ್ಯಪಾಲರನ್ನು ವಜಾ ಮಾಡುವಂತೆ ಯುವ ಕಾಂಗ್ರೆಸ್ ಮನವಿ



» ಚಿತ್ರದುರ್ಗ

ಸಂವಿಧಾನಬಾಹಿರವಾಗಿ ಮುಖ್ಯಮಂತ್ರಿ ಸಿದ್ಧರಾಮಯ್ಯನವರ ವಿರುದ್ಧ 30-40 ವರ್ಷಗಳ ಹಳೆಯ ಸಿವಿಲ್ ಸ್ವರೂಪದ ಪ್ರಕ್ರಿಯೆ ರಾಜ್ಯಪಾಲರು ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರನ್ನು ವಜಾ ಮಾಡುವಂತೆ ಒತ್ತಾಯಿಸಿ ಚಿತ್ರದುರ್ಗ ಜಿಲ್ಲಾ ಯುವ ಕಾಂಗ್ರೆಸ್ ಕಾನೂನು ಘಟಕ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಮಾಡಿತು. ಕರ್ನಾಟಕ ಸರ್ಕಾರವು ಮೂಡಾ ಹಗರಣವನ್ನು ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಿಂದ ತನಿಖೆ ನಡೆಸುತ್ತಿರುವಾಗಲೇ ರಾಜ್ಯಪಾಲರು ತರಾತುರಿಯಲ್ಲಿ ಕಾನೂನುಬಾಹಿರವಾಗಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದರಿಂದ ಕೂಡಲೇ ಅವರನ್ನು ವಜಾ ಮಾಡಬೇಕು. ರಾಜ್ಯಪಾಲರು ಕರ್ನಾಟಕದ ಸ್ಥಿರ ಸರ್ಕಾರವನ್ನು ಅಸ್ಥಿರಗೊಳಿಸಲು ಕಿರುಕುಳ ನೀಡುತ್ತಿದ್ದಾರೆ. ರಾಜ್ಯಪಾಲರು ಮತ್ತು ಕೇಂದ್ರ ಸರ್ಕಾರ ರಾಜ್ಯಭವನವನ್ನು ಬಿ.ಜೆ.ಪಿ.ಯ ಕೈಗೊಂಬೆಯನ್ನಾಗಿ ಮಾಡಿಕೊಂಡಿದ್ದಾರೆ. ಕೇಂದ್ರ ಸರ್ಕಾರವು ಸಂವಿಧಾನ ಸಂಸ್ಥೆಗಳಾದ ಋಖಿ/ಇಆ/ಅಃಋ ಮತ್ತು ರಾಜಭವನವನ್ನು ದುರ್ಬಳಕೆ ಮಾಡಿಕೊಂಡು ಸಂವಿಧಾನವಾಹಿರ ಕೃತ್ಯದಲ್ಲಿ ತೊಡಗಿರುತ್ತದೆ. ರಾಜ್ಯಪಾಲರ ಮುಂದೆ ಪ್ರಾಸಿಕ್ಯೂಷನ್‌ಗಾಗಿ ನೂರಾರು ದೂರುಗಳು ಬಾಕಿ ಇದ್ದರೂ ಮುಖ್ಯಮಂತ್ರಿಗಳ ವಿರುದ್ಧ ತರಾತುರಿಯಲ್ಲಿ ಅನುಮತಿ ನೀಡಿರುವುದು ಸಂವಿಧಾನ ಬಾಹಿರ ಎಂದು ದೂರಿದ್ದಾರೆ. ಕೇಂದ್ರ ಸರ್ಕಾರವು ರಾಜ್ಯದಲ್ಲಿನ ಚುನಾಯಿತ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳುಗೆಡವಿ ರಾಜ್ಯದಲ್ಲಿ ಅಶಾಂತಿ ಉಂಟುಮಾಡುವ ಪ್ರಯತ್ನ ಮಾಡುತ್ತಿದೆ. ಕರ್ನಾಟಕ ರಾಜ್ಯಪಾಲರ ಸಂವಿಧಾನಬಾಹಿರ ನಡೆಯ ಹಿಂದಿರುವ ಒಳಸಂಚು ಮತ್ತು ವಿಚಿತ್ರಕಾರಿ ಶಕ್ತಿಗಳ ವಿರುದ್ಧ ಅವರಿಗೆ ಕಾನೂನುಬಾಹಿರವಾದ ಸಲಹೆ ನೀಡಿರುವವರ ವಿರುದ್ಧ ಮತ್ತು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲು ಸಹಕರಿಸಿರುವವರ ವಿರುದ್ಧ ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಿಂದ ತನಿಖೆ ನಡೆಸಲು ಒತ್ತಾಯ.

**ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ -ರಾಜ್ಯಾದ್ಯಂತ ಏಕಕಾಲಕ್ಕೆ ಮಾನವಸರಪಳಿ ನಿರ್ಮಾಣ**

# 110 ಕಿ.ಮೀ.ಮಾನವಸರಪಳಿ ಯಶಸ್ವಿಗೊಳಿಸಿ

» ಚಿತ್ರದುರ್ಗ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಇದೇ ಸೆ. 15 ರಂದು ರಾಜ್ಯಾದ್ಯಂತ ಬೀದರ್‌ನಿಂದ ಚಾಮರಾಜನಗರ ವರೆಗೆ ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶಿಷ್ಟವಾಗಿ ಆಚರಿಸಲಾಗುತ್ತಿದ್ದು, ಜಿಲ್ಲೆಯಲ್ಲೂ 110 ಕಿ.ಮೀ. ನಷ್ಟು ಮಾನವ ಸರಪಳಿ ನಿರ್ಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಲು ಅಗತ್ಯವಿರುವ ಎಲ್ಲ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ರಾಜ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತಿದ್ದು, ರಾಜ್ಯದಲ್ಲಿ ಈ ಬಾರಿ ಏಕಕಾಲಕ್ಕೆಬೀದರ್‌ನಿಂದಚಾಮರಾಜನಗರ ವರೆಗೆ ರಾಜ್ಯಾದ್ಯಂತ ಏಕಕಾಲಕ್ಕೆ ಮಾನವ ಸರಪಳಿ ನಿರ್ಮಿಸಿ, ಏಕಕಾಲಕ್ಕೆ ಸಂವಿಧಾನ ಪೀಠಿಕೆ ವಾಚನ ಮಾಡಲಾಗುವುದು. ಈ ಬೃಹತ್ ಮಾನವ ಸರಪಳಿಗೆ ಚಿತ್ರದುರ್ಗ ಜಿಲ್ಲೆಯಲ್ಲೂ ಕೈ ಜೋಡಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ಮೊಳಕಾಲ್ಮೂರು



ತಾಲ್ಲೂಕು ತಮ್ಮೇನಹಳ್ಳಿ (ಗಡಿಭಾಗ) ಯಿಂದ ಆರಂಭಗೊಳ್ಳುವ ಮಾನವ ಸರಪಳಿಯು ಹಿರಿಯೂರು ತಾಲ್ಲೂಕು ಜವಗೊಂಡನಹಳ್ಳಿ (ಗಡಿಭಾಗ) ವರೆಗೆ 110 ಕಿ.ಮೀ. ವರೆಗೂ ನಿರ್ಮಾಣಗೊಳ್ಳಲಿದೆ. ಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕುಗಳಲ್ಲಿ ಈ ಮಾನವ ಸರಪಳಿ ನಿರ್ಮಾಣ ಆಗಬೇಕು. ಇದೊಂದುವಿಶೇಷಮತ್ತುದೇಶಾಭಿಮಾನದ ಕಾರ್ಯಕ್ರಮವಾಗಿದ್ದು ಎಲ್ಲ ಸಾರ್ವಜನಿಕರು, ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಜನಪ್ರತಿನಿಧಿಗಳು, ಸರ್ಕಾರಿ ನೌಕರರು ಸ್ವಯಂ ಪ್ರೇರಿತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು. ಮಾನವ ಸರಪಳಿಯು ರಾಷ್ಟ್ರೀಯ ಹೆದ್ದಾರಿಯಲ್ಲಿ ನಿರ್ಮಾಣವಾಗುವುದರಿಂದ, ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ತೊಂದರೆಯಾಗದ ರೀತಿ ವಾಹನ ಸಂಚಾರ ದಟ್ಟಣೆಯನ್ನು ಪೊಲೀಸ್ ಇಲಾಖೆ ಅಧಿಕಾರಿಗಳು ಸಮರ್ಪಕವಾಗಿ ನಿರ್ವಹಿಸಬೇಕು. ಕಾರ್ಯಕ್ರಮವನ್ನು ಅತ್ಯಂತ ಅಚ್ಚುಕಟ್ಟಾಗಿ ರೂಪಿಸಲು ಅಧಿಕಾರಿಗಳು ಈಗಿನಿಂದಲೇ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಸೆ. 06 ರಂದು ಆಯಾ ವಿಧಾನಸಭಾ ಕ್ಷೇತ್ರ ಶಾಸಕರ ನೇತೃತ್ವದಲ್ಲಿ ಅಧಿಕಾರಿಗಳೊಂದಿಗೆ ಏಕಕಾಲಕ್ಕೆ ಸಭೆ ನಡೆಸಿ, ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

ಜಿಲ್ಲಾಧಿಕಾರಿ ವೆಂಕಟೇಶ್ ಟಿ. ಅವರು ಕಾರ್ಯಕ್ರಮದ ರೂಪರೇಷೆ ಕುರಿತು ಮಾಹಿತಿ ನೀಡಿ, ಸರ್ಕಾರದ ಸೂಚನೆಯಂತೆ ಈ ಬಾರಿ ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಬೃಹತ್ ಮಾನವ ಸರಪಳಿ ನಿರ್ಮಿಸುವ ಮೂಲಕ ವಿಶಿಷ್ಟವಾಗಿ ಆಚರಿಸಲಾಗುತ್ತಿದೆ. ಜಿಲ್ಲೆಯಲ್ಲಿ ಒಟ್ಟು 110 ಕಿ.ಮೀ. ಮಾನವ ಸರಪಳಿಯನ್ನು ನಿರ್ಮಿಸಲಾಗುವುದು, ಪ್ರತಿ ಕಿ.ಮೀ. ಗೆ ಸುಮಾರು 850 ಜನರಂತೆ, ಒಟ್ಟು 110 ಕಿ.ಮೀ. ಗೆ ಅಂದಾಜು 95000 ಜನರ ಅಗತ್ಯವಿದೆ. ಇದಕ್ಕಾಗಿ ಈಗಾಗಲೆ ಸಿದ್ಧತೆಗಳನ್ನು ಪ್ರಾರಂಭಿಸಲಾಗಿದ್ದು, ಸುಮಾರು 35000 ವಿದ್ಯಾರ್ಥಿಗಳು, 25000 ಸ್ವ-ಸಹಾಯ ಸಂಘ ಪ್ರತಿನಿಧಿಗಳು, 2000 ಆಶಾ, ಅಂಗನವಾಡಿ ಕಾರ್ಯಕರ್ತೆಯರು, 4000 ಬೋಧಕ, ಬೋಧಕೇತರ ಸಿಬ್ಬಂದಿಗಳು, ಮಾರ್ಗದ ಅಕ್ಕ-ಪಕ್ಕದ ಗ್ರಾ.ಪಂ. ಗಳಿಂದ ಸುಮಾರು 25000 ಹಾಗೂ ನಗರ, ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿ ಸುಮಾರು 10000 ಜನರು ಭಾಗಿಯಾಗುವನಿರೀಕ್ಷೆಯನ್ನುಹೊಂದಿದ್ದು, ಅದರಂತೆ ಕಾರ್ಯಕ್ರಮ ರೂಪಿಸಲಾಗಿದೆ. ಇದಕ್ಕಾಗಿ ಖಾಸಗಿ ಶಾಲೆಗಳ ಸುಮಾರು 200 ಕ್ಕೂ ಹೆಚ್ಚು ಬಸ್ ಗಳನ್ನು ಸಾರಿಗೆ ಸಂಪರ್ಕಕ್ಕಾಗಿ ಬಳಸಲು ಯೋಜಿಸಲಾಗಿದೆ. ಪ್ರತಿ 05 ಕಿ.ಮೀ. ಗೆ ಒಬ್ಬರು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಯನ್ನಾಗಿ ನಿಯೋಜಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಸಾರ್ವಜನಿಕರು, ವಿದ್ಯಾರ್ಥಿಗಳಿಗೆ ಸಾಕಷ್ಟು ಶುದ್ಧ ಕುಡಿಯುವ ನೀರು, ಮುಂಜಾಗ್ರತಾ ಕ್ರಮವಾಗಿ ವೈದ್ಯಕೀಯ ರಕ್ಷಣೆ, ಆಂಬುಲೆನ್ಸ್ ವ್ಯವಸ್ಥೆ ಮಾಡಲಾಗುವುದು ಎಂದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವು ದೇಶಾಭಿಮಾನ ಬಿಂಬಿಸುವ ವಿಶೇಷ ಕಾರ್ಯಕ್ರಮವಾಗಿದ್ದು, ಎಲ್ಲ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಈ ಸಂದರ್ಭದಲ್ಲಿ ಸೂಚನೆ ನೀಡಿದರು.

ಸಭೆಯಲ್ಲಿ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ. ರಘುಮೂರ್ತಿ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಅವರು ಭಾಗವಹಿಸಿ ಕಾರ್ಯಕ್ರಮದ ಯಶಸ್ವಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಬಂಡಾರು, ಉಪವಿಭಾಗಾಧಿಕಾರಿ ಕಾರ್ತಿಕ್, ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಆರ್.ಆರ್.ನಂಬರ್‌ಗೆ ಆಧಾರ್ ಲಿಂಕ್ ವಿರೋಧಿಸಿ ಸೆ.6ರಂದು ಪ್ರತಿಭಟನೆ

» ಚಳ್ಳಕೆರೆ

ಪ್ರಸ್ತುತ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ರೈತ ಸಮುದಾಯಕ್ಕೆ ನಿರಂತರವಾಗಿ ಅನ್ಯಾಯವನ್ನು ಮಾಡುತ್ತಾ ಬಂದಿದ್ದು, ಇತ್ತೀಚೆಗೆ ತಾನೇ ರೈತ ಕೃಷಿ ಪಂಪ್‌ಸೆಟ್‌ಗಳಿಗೆ ಆರ್.ಆರ್ ನಂಬರ್‌ಗೆ ಆಧಾರ ಲಿಂಕ್ ಮಾಡುವುದಲ್ಲದೆ, ಮೀಟರ್ ಅಳವಡಿಸಿ ಶುಲ್ಕ ವಸೂಲಿ ಮಾಡುವುದನ್ನು ವಿರೋಧಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ಸೆ.6ರ ಶುಕ್ರವಾರ ಬೆಳಗ್ಗೆ 11.30ಕ್ಕೆ ಬೆಸ್ಕಾಂ ಕಚೇರಿ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ತಾಲ್ಲೂಕು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ ತಿಳಿಸಿದ್ದಾರೆ.

ಅವರು, ನಗರದ ಪ್ರವಾಸಿಮಂದಿರದಲ್ಲಿ ಹಮ್ಮಿಕೊಂಡಿದ್ದ ರೈತ ಸಂಘ ಪದಾಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರಲ್ಲದೆ, ಸೆ.6ರ ಪ್ರತಿಭಟನೆಯ ಬಗ್ಗೆ ಸಮಾಲೋಚನೆ ನಡೆಸಿದರು. ಪ್ರತಿಭಟನೆಯಲ್ಲಿ ತಾಲ್ಲೂಕಿನಾದ್ಯಂತ



ಸಾವಿರಾರು ರೈತರು ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಮಾತನಾಡಿ, ರಾಜ್ಯ ಸರ್ಕಾರ ರೈತರ ಬಗ್ಗೆ ನಿರ್ಲಕ್ಷ್ಯಧೋರಣೆ ತಾಳಿದೆ. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಮೀಟರ್ ಅಳವಡಿಸಿ ಶುಲ್ಕ ವಸೂಲಿ ಮಾಡುವುದು ತರವಲ್ಲ, ಸರ್ಕಾರ ಯಾವುದೇ ಕೆಲಸವನ್ನು ಮಾಡಿದರೂ ರೈತರನ್ನು ಸಂಪರ್ಕ ಮಾಡುವುದು ಮರೆತಿದೆ. ರೈತರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಮುಂದುವರೆದರೇ ಮಾತ್ರ ಸರ್ಕಾರಕ್ಕೆ ಗೌರವ ಬರುತ್ತದೆ. ರೈತ ಸಂಘ ಎಲ್ಲಾ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದ್ದಾರೆ.

ಜಿಲ್ಲಾ ಉಪಾಧ್ಯಕ್ಷ ಜೆ.ಎಸ್.ಯರ್ರಿಸ್ವಾಮಿ, ಬಂಗಾರಪ್ಪ, ಓಬಯ್ಯ, ಚಿತ್ತಯ್ಯ, ಪಾಪಣ್ಣ, ಜಯಣ್ಣ, ನಾಗರಾಜಪ್ಪ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಗಣೇಶ ಮೂರ್ತಿಗಳು ಬಂದಿಳಿದಿರುವುದು.

## ಶಿವಮೊಗ್ಗ ಹಾಲುಒಕ್ಕೂಟದ ನೂತನ ನಿರ್ದೇಶಕರಿಗೆ ಸನ್ಮಾನ



» ಚಳ್ಳಕೆರೆ

ಕಳೆದ ತಿಂಗಳು ನಡೆದ ಶಿವಮೊಗ್ಗ ಹಾಲುಒಕ್ಕಟದ ಚುನಾವಣೆಯಲ್ಲಿ ಚಿತ್ರದುರ್ಗ ಜಿಲ್ಲೆಯಿಂದ ಆಯ್ಕೆಯಾದ ನಾಲ್ವರು ನಿರ್ದೇಶಕರು ಹಾಗೂ ಮತ ನೀಡಿದ ಚಳ್ಳಕೆರೆ ಮತ್ತು ಮೊಳಕಾಲ್ಮೂರು ಹಾಲು ಒಕ್ಕೂಟದ ಅಧ್ಯಕ್ಷರನ್ನು ಸಾಯಿಬಾಬಾ ಮಂದಿರದಲ್ಲಿ ಆತ್ಮೀಯವಾಗಿ ಸನ್ಮಾನಿಸಿ, ಅಭಿನಂದಿಸಲಾಯಿತು. ವೆಂಕಟಸಾಯಿ ಸೇವಾಟ್ರಸ್ಟ್ ಅಧ್ಯಕ್ಷ ಹಾಗೂ ಕೆಎಂಎಫ್ ನೂತನ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಶಿವಮೊಗ್ಗ ಹಾಲು ಒಕ್ಕೂಟ ರೈತರಿಗೆ ಹೆಚ್ಚಿನ ನೆರವು ನೀಡುವುದಲ್ಲದೆ, ಗ್ರಾಹಕರ ಹಿತರಕ್ಷಣೆ ಮಾಡುವಲ್ಲಿ ಸದಾಮುಂದಿದೆ. ವಿಶೇಷವಾಗಿ ನಂದಿನಿಯ ಎಲ್ಲಾ ಉತ್ಪನ್ನಗಳು ಮಾರುಕಟ್ಟೆಯಲ್ಲಿ ತಮ್ಮದೇಯಾದ ವಿಶೇಷ ಮೌಲ್ಯವನ್ನು ಹೊಂದಿವೆ. ಶಿವಮೊಗ್ಗ ಹಾಲು ಒಕ್ಕೂಟದ ಚಿತ್ರದುರ್ಗ ಜಿಲ್ಲಾ ನಿರ್ದೇಶಕರಾಗಿ ನಮ್ಮನ್ನು ಆಯ್ಕೆ ಮಾಡಿದ ಎರಡೂ ತಾಲ್ಲೂಕುಗಳ ಹಾಲುಒಕ್ಕೂಟದ ಅಧ್ಯಕ್ಷ ಹಾಗೂ ಪ್ರಧಾನ ಕಾರ್ಯದರ್ಶಿಗಳಿಗೆ ಅಭಿನಂದಿಸುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಶಿವಮೊಗ್ಗದ ಹಾಲು ಒಕ್ಕೂಟದಿಂದ ರೈತ ಸಮುದಾಯಕ್ಕೆ ಹೆಚ್ಚಿನ ನೆರವು ಕಲ್ಪಿಸುವ ಭರವಸೆ ನೀಡಿದರು. ಶಿವಮೊಗ್ಗ ಹಾಲು ಒಕ್ಕೂಟದ ನೂತನ ಜಿಲ್ಲಾ ನಿರ್ದೇಶಕರಾದ ಚಿತ್ರದುರ್ಗರೇವಣಸಿದ್ದಪ್ಪ, ಹೊಳಲ್ಕೆರೆಶೇಖರಪ್ಪ, ರವಿಕುಮಾರ್ ಇವರನ್ನು ಸನ್ಮಾನಿಸಲಾಯಿತು ಹಾಗೂ ಹೆಚ್ಚಿನ ಮತ ನೀಡಿ ಆಯ್ಕೆ ಮಾಡಿದ ಮತದಾರರಿಗೂ ಅಭಿನಂದನೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ನಜೀರ್‌ಬೇಗಂ, ಡಾ.ಸಂದೀಪ್, ಉದಯಕುಮಾರ್, ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

**ಪೌಷ್ಟಿಕಾಂಶ ಸಪ್ತಾಹದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ**

# ಉತ್ತಮ ಪೋಷಣೆ ಆರೋಗ್ಯಕರ ಜೀವನಕ್ಕೆ ಅಡಿಪಾಯ

» ಚಿತ್ರದುರ್ಗ

ಉತ್ತಮ ಪೋಷಣೆ ಆರೋಗ್ಯಕರ ಜೀವನಕ್ಕೆ ಅಡಿಪಾಯವಾಗಿದೆ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್. ಎಸ್.ಮಂಜುನಾಥ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಕಾಸವರಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಹೊಸಕಲ್ಲಹಳ್ಳಿ ಗ್ರಾಮದ ಅಂಗನವಾಡಿ ಬಳಿ ಇರುವ ಶ್ರೀ ರಾಮ ದೇವಸ್ಥಾನದ ಆವರಣದಲ್ಲಿ ಸೋಮವಾರ ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

ರಾಷ್ಟ್ರೀಯ ಪೋಷಣೆ ಸಪ್ತಾಹ-2024 ಅನ್ನು ಇದೇ ಸೆಪ್ಟೆಂಬರ್ 1 ರಿಂದ 7 ರವರೆಗೆ ಆಚರಿಸಲಾಗುತ್ತದೆ. ಸಮತೋಲಿತ ಆಹಾರ ಮತ್ತು ಆರೋಗ್ಯಕರ ಜೀವನಶೈಲಿಯ ಪ್ರಾಮುಖ್ಯತೆಯನ್ನು ಉತ್ತೇಜಿಸಲು ಈ ಬಾರಿ ಪೌಷ್ಟಿಕಾಂಶದ ಅಗತ್ಯತೆಗಳ ಬಗ್ಗೆ ಜಾಗೃತಿ ಹಾಗೂ ಎಲ್ಲಾ ವಯಸ್ಸಿನ



ವ್ಯಕ್ತಿಗಳಲ್ಲಿ ಆರೋಗ್ಯಕರ ಆಹಾರ ಪದ್ಧತಿ ಪ್ರೋತ್ಸಾಹಿಸುಸುತ್ತದೆ ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್ ಮಾತನಾಡಿ, ಪ್ರತಿ ವರ್ಷ ರಾಷ್ಟ್ರೀಯ ಪೌಷ್ಟಿಕಾಂಶ ವಾರಕ್ಕೆ ನಿರ್ದಿಷ್ಟ ಥೀಮ್‌ಆಯ್ಕೆಮಾಡಲಾಗುತ್ತದೆ.ಈಥೀಮ್ ಪ್ರಮುಖ ಪೌಷ್ಟಿಕಾಂಶದ ವಿಷಯಗಳ ಕುರಿತು ಚರ್ಚೆಗಳು ಮತ್ತು ಯೋಜನೆಗಳಿಗೆ ಮಾರ್ಗದರ್ಶನ ನೀಡುತ್ತದೆ. ಈ ವರ್ಷದ ಥೀಮ್ "ಎಲ್ಲರಿಗೂ ಪೌಷ್ಟಿಕ ಆಹಾರಗಳು, ಸುಸ್ಥಿರ ಅಭಿವೃದ್ಧಿಗಾಗಿ ವಿಶ್ವಸಂಸ್ಥೆಯ ಗುರಿಗಳನ್ನು ಬೆಂಬಲಿಸುತ್ತದೆ. ಇದು ಜೀವನದ ಎಲ್ಲಾ ಹಂತಗಳಲ್ಲಿ ಜನರ ಪೌಷ್ಟಿಕಾಂಶದ ಅಗತ್ಯ ಪೂರೈಸುವ ಆಹಾರಕ್ರಮ ಪ್ರೋತ್ಸಾಹಿಸುವುದರ ಮೇಲೆ ಕೇಂದ್ರೀಕರಿಸುತ್ತದೆ ಎಂದರು.

ಜಿಲ್ಲಾ ಪೋಷಣ್ ವಿಭಾಗದ ವ್ಯವಸ್ಥಾಪಕ ಕರಕಪ್ಪ ಮೇಟಿ ಮಾತನಾಡಿ, ಆರೋಗ್ಯಕರ ಜೀವನಕ್ಕಾಗಿ ನಿತ್ಯ ಆಹಾರ ಕ್ರಮದಲ್ಲಿ ಫೋಲಿಕ್ ಆಮ್ಲ ಮತ್ತು ಕಬ್ಬಿಣಾಂಶ ಹೆಚ್ಚು ಇರುವ ಆಹಾರ ಸೇವನೆ ರಕ್ತಹೀನತೆ ತಪ್ಪಿಸುತ್ತದೆ ಎಂದರು.

ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಮನುಜಾ ಮಾತನಾಡಿ, ಬಾಲ್ಯ ವಿವಾಹ ಮಾಡಬೇಡಿ ಬಾಲ ಗರ್ಭಿಣಿಯರಿಗೆ ಉಂಟಾಗುವ ತಾಯಿ ಮರಣ, ಶಿಶು ಮರಣದ ಬಗ್ಗೆ ತಿಳಿಸಿ ಬಾಲ್ಯ ವಿವಾಹ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿ ಶಿಸ್ತು ಕ್ರಮ ಜರುಗಿಸಲಾಗುವುದು ಎಂದರು.

ಶಾಲಾ ಮಕ್ಕಳ ಪೋಷಣೆಗಾಗಿ ಕೆನೆ ಹಾಲು, ಮಧ್ಯಾಹ್ನದ ಬಿಸಿ ಊಟ, ವಾರಕ್ಕೊಮ್ಮೆ ಕಬ್ಬಿಣಾಂಶ ಮಾತ್ರೆ ನುಂಗಿಸುವ ಕಾರ್ಯಕ್ರಮ ಸರ್ಕಾರ ನೀಡಿದೆ ಎಂದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಸಿ.ಆರ್.ಪಿ ಮಲ್ಲಿಕಾ, ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಶಿಕ್ಷಕರಾದ ಶಶಿಕಲಾ, ಮಂಜುಳಾ, ಆಶಾ ಕಾರ್ಯಕರ್ತೆ ಪಾರ್ವತಮ್ಮ, ಹಿರಿಯ ನಾಗರಿಕ ಈರಪ್ಪ, ತಾಯಂದಿರ ಅತ್ತೆಯರು, ಹದಿಹರೆಯದ ಕಿಶೋರ ಕಿಶೋರಿಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T